# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 Issue : 28 SATURDAY 04-04-2026 PRGI No : KNKAN/26/A0962 Pages:4 Rs.2.00 M: 9742418836

# ನಾನು ಸಾಲರಾಮಯ್ಯ ಅಲ್ಲ, ಅನ್ನದ ರಾಮಯ್ಯ; ಬಿಜೆಪಿಗೆ ಸಿಎಂ ಸಿದ್ದರಾಮಯ್ಯ ತಿರುಗೇಟು



ದಾವಣಗೆರೆ: 'ನಾನು ಸಾಲದ ರಾಮಯ್ಯ ಅಲ್ಲ. ಅನ್ನದ ರಾಮಯ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದ್ದಾರೆ.

ದಾವಣಗೆರೆ ದಕ್ಷಿಣ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ ಎಂ.ಶಾಮನೂರು ಪರ ರೋಡ್ ಶೋ ನಡೆಸಿ ಮಾತನಾಡಿದ ಅವರು, ಬಿಜೆಪಿಯವರಿಗೆ ನಾಚಿಕೆ, ಮಾನ, ಮರ್ಯಾದೆಯೇ ಇಲ್ಲ. ನಾವು ಬಡವರ ಪರ ಇರುವವರು. ಎಲ್ಲ ವರ್ಗದ ಜನರ ಪರ ನಿಲ್ಲುವವರು ಎಂದು ಬಿಜೆಪಿ ನಾಯಕರಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಆರ್.ಅಶೋಕ, ಬಿ.ವೈ.ವಿಜಯೇಂದ್ರ ವಿರುದ್ಧ ಹರಿಹಾಯ್ದಿದ್ದಾರೆ.

ನಾನು ಅನ್ನದ ರಾಮಯ್ಯನೇ ಹೊರತು, ಸಾಲದ ರಾಮಯ್ಯ ಅಲ್ಲ. ಬಿಜೆಪಿ ಸರ್ಕಾರ ಮಾರ್ಚ್ 2023ರವರೆಗೆ 5,30,000 ಕೋಟಿ ರೂಪಾಯಿಗೂ ಅಧಿಕ ಸಾಲ ಮಾಡಿದ್ದರೆ, ನಮ್ಮ ಸರ್ಕಾರ 4 ವರ್ಷದಲ್ಲಿ 2.56 ಲಕ್ಷ ಕೋಟಿ ರೂಪಾಯಿ ಸಾಲ ಮಾಡಿದೆ. ಪ್ರಧಾನಿ ನರೇಂದ್ರ ಮೋದಿಯವರ 12 ವರ್ಷಗಳ ಅಧಿಕಾರದ ಅವಧಿಯಲ್ಲಿ 165 ಲಕ್ಷ ಕೋಟಿ ರೂಪಾಯಿ ಸಾಲ ಮಾಡಿದ್ದಾರೆ. ಮೋದಿ ಅಧಿಕಾರಕ್ಕೆ ಬರುವ ಮುನ್ನ ದೇಶದ ಮೇಲೆ 53.11 ಲಕ್ಷ ಕೋಟಿ ರೂಪಾಯಿ ಸಾಲ ಇತ್ತು. ಈಗ 218 ಲಕ್ಷ ಕೋಟಿಯಷ್ಟು ಸಾಲ ಇದೆ ಎಂದರು.

ಮೋದಿ ಆಳ್ವಿಕೆಯಲ್ಲಿನ ರುಪಾಯಿ ಮೌಲ್ಯ ಕುಸಿತದ ಬಗ್ಗೆ ಬಿಜೆಪಿಯವರು ಚಕಾರ ಎತ್ತುತ್ತಿಲ್ಲ. ಚುನಾವಣೆ ಪೂರ್ವದಲ್ಲಿ ನರೇಂದ್ರ ಮೋದಿ ಹೇಳಿದ್ದ ಅಚ್ಛೇ ದಿನಗಳು ಇಂದಿಗೂ ಬರಲೇ ಇಲ್ಲ. ರೈತರ ಆದಾಯ ದ್ವಿಗುಣ, ಪ್ರತಿ ವರ್ಷ 2 ಕೋಟಿ ಉದ್ಯೋಗ ಸೃಷ್ಟಿ, ಖಾತೆಗೆ 15 ಲಕ್ಷ ಹಣ ಅಂತೆಲ್ಲಾ ಭರವಸೆಗಳನ್ನು ನೀಡಿದ್ದರು. ಆದರೆ, ಅಂತಹ ಭರವಸೆಗಳನ್ನು ಇಂದಿಗೂ ಮೋದಿ ಸರ್ಕಾರ ಈಡೇರಿಸಿಲ್ಲ. ಇದನ್ನು ಬಿಜೆಪಿ ನಾಯಕರು ಹೇಳುವುದಿಲ್ಲ. ರಾಜ್ಯದ ಬಿಜೆಪಿ ನಾಯಕರು ಮೋದಿ ಮುಂದೆ ನಿಲ್ಲಲು ಹೆದರುತ್ತಾರೆ. ಮೋದಿ ಮುಂದೆ ಇವರೆಲ್ಲಾ ಗಡಗಡ ಅಂತಾ ನಡುಗುತ್ತಾರೆ. ಬಿಜೆಪಿಯವರು ಸದನದ ಒಳಗಡೆ ಮಾತನಾಡುವುದಿಲ್ಲ. ಹೊರಗಡೆ ಮಾತನಾಡುತ್ತಾರೆ ಎಂದು ವ್ಯಂಗ್ಯವಾಡಿದರು.

ಅನ್ಯ ರಾಜ್ಯಗಳ ಬೆಲೆ ಏರಿಕೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಗಣನೀಯವಾಗಿ ಬೆಲೆಗಳು ಕಡಿಮೆ ಇವೆ. ಇತರ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದ ಹಣಕಾಸಿನ ಸ್ಥಿತಿ ಸುಭದ್ರವಾಗಿದೆ. ದೇಶದ ಜಿಡಿಪಿ 7.14ರಷ್ಟು ಇದ್ದರೆ, ರಾಜ್ಯದ ಜಿಡಿಪಿ 8.1ರಷ್ಟು ಇದೆ. ನಮ್ಮ ಬಜೆಟ್ ಗಾತ್ರ ಕಳೆದ ವರ್ಷಕ್ಕಿಂತ ಈ ಸಲ 9.4ರಷ್ಟು ಹೆಚ್ಚಾಗಿದೆ.

ಕೇಂದ್ರದ ಬಜೆಟ್‌ಗಿಂತ ಕರ್ನಾಟಕ ಬಜೆಟ್ ಉತ್ತಮವಾಗಿದೆ. ರಾಜ್ಯವು ಜಿಎಸ್‌ಟಿ ಸಂಗ್ರಹಣೆಯಲ್ಲಿ ದೇಶಕ್ಕೆ 2ನೇ ಸ್ಥಾನದಲ್ಲಿದೆ. ಬಂಡವಾಳ ಹೂಡಿಕೆಯಲ್ಲೂ ನಮ್ಮ ರಾಜ್ಯ 2ನೇ ಸ್ಥಾನದಲ್ಲಿದೆ. ಹೀಗಿದ್ದರೂ ರಾಜ್ಯದ ಆರ್ಥಿಕ ಪರಿಸ್ಥಿತಿ ಉತ್ತಮವಾಗಿಲ್ಲ ಎಂದು ಬಿಜೆಪಿಯವರು ಕೇವಲ ರಾಜಕೀಯ ಲಾಭಕ್ಕಾಗಿ ಹೇಳಿಕೆ ನೀಡುತ್ತಿದ್ದಾರೆ ಎಂದು ಕುಟುಕಿದರು.

## ಎರಡು ಕ್ಷೇತ್ರದಲ್ಲೂ ಕಾಂಗ್ರೆಸ್ ಗೆಲುವು

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ದೊಡ್ಡ ಅಂತರದಲ್ಲಿ ಗೆಲುವು ಸಾಧಿಸುವ ಸಂಪೂರ್ಣ ವಿಶ್ವಾಸವಿದೆ. ಇಲ್ಲಿನ ಅಭಿವೃದ್ಧಿ ಕಾರ್ಯಕ್ರಮ ಹಾಗೂ ಗ್ಯಾರಂಟಿ ಯೋಜನೆಗಳು ಕಾಂಗ್ರೆಸ್ಸಿನ ನೆರವಿಗೆ ಬಂದಿವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

# ನಾನು ಸಿಎಂ ಆಗಿ ಮೊದಲ ಸಂಪುಟ ಸಭೆಯಲ್ಲಿಯೇ ಮುಸ್ಲಿಂರನ್ನು ಅಲ್ಪಸಂಖ್ಯಾತ ಪಟ್ಟಿಯಿಂದ ಹೊರಹಾಕುತ್ತೇನೆ: ಶಾಸಕ ಯತ್ನಾಳ್



ವಿಜಯಪುರ: ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು, ನಾನು ಮುಖ್ಯಮಂತ್ರಿಯಾಗಿ ಮೊದಲ ಸಚಿವ ಸಂಪುಟ ಸಭೆಯಲ್ಲಿಯೇ ಮುಸ್ಲಿಂರನ್ನು ಅಲ್ಪಸಂಖ್ಯಾತ ಪಟ್ಟಿಯಿಂದ ಹೊರಹಾಕುತ್ತೇನೆ. ಇವರ ಹೊರತಾಗಿ ಮರಾಠರು, ಬ್ರಾಹ್ಮಣರು, ಕ್ಷತ್ರೀಯರು ಸೇರಿದಂತೆ ಅನೇಕರು ಅಲ್ಪಸಂಖ್ಯಾತರು ಇದ್ದಾರೆ. ಅವರಿಗೆಲ್ಲ ಅಲ್ಪಸಂಖ್ಯಾತ ಸ್ಥಾನಮಾನ ಕೊಡುತ್ತೇನೆ ಎಂದರು.

ವಿಜಯಪುರದಲ್ಲಿ ಮಾತನಾಡಿದ ಯತ್ನಾಳ್, ಇಂದು ಹನುಮ ಜಯಂತಿ. ಹನುಮಂತನ ಸನ್ನಿಧಾನದಲ್ಲಿ ನಿಂತು ಹೇಳುತ್ತೇನೆ. ನಾನು ಯಾವುದೇ ಕಾರಣಕ್ಕೂ ನನ್ನನ್ನು ಬಿಜೆಪಿಗೆ ಸೇರಿಸಿಕೊಳ್ಳಿ ಅಂತಾ ಹೇಳಲ್ಲ. ಅಪ್ಪ–ಮಗನನ್ನು ಕೈಬಿಟ್ಟು ಅವರಾಗಿಯೇ ನನ್ನನ್ನು ಬಿಜೆಪಿಗೆ ಬರುವಂತೆ ಆಹ್ವಾನಿಸುತ್ತಾರೆ. ಬಳಿಕ ಸಿಎಂ ಆಗಿ ರಾಜ್ಯದಲ್ಲಿ ಯೋಗಿ ಆದಿತ್ಯನಾಥ್ ರೀತಿ ರಾಜ್ಯಭಾರ ಮಾಡುತ್ತೇನೆ ಎಂದು ಹೇಳಿದರು.

ಇನ್ನು ಬಾಗಲಕೋಟೆಯ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ನನ್ನ ಆತ್ಮೀಯರು. ಅವರ ಪರ ಪ್ರಚಾರ ಮಾಡುವಂತೆ ಬಿಜೆಪಿ ಕಾರ್ಯಕರ್ತರು ನನ್ನನ್ನು ಕರೆದಿದ್ದಾರೆ. ಅದಕ್ಕಾಗಿ ನಾನು ಚಿರಂತಿಮಠ ಅವರ ಪರ ಪ್ರಚಾರಕ್ಕೆ ಹೋಗುತ್ತಿದ್ದೇನೆ ಎಂದರು.

# ಬೆಳಗಾವಿ: ಗ್ರಾಹಕರ ಹಣ ಮರಳಿಸದ ಸೊಸೈಟಿ ಅಧ್ಯಕ್ಷನಿಗೆ ಒಂದು ವರ್ಷ ಜೈಲು ಶಿಕ್ಷೆ

**ಬೆಳಗಾವಿ ವಾರ್ತೆ ಬೆಳಗಾವಿ** ಗ್ರಾಹಕರ ಠೇವಣಿ ಮರಳಿಸುವಂತೆ ನೀಡಿದ್ದ ಆದೇಶ ಪಾಲಿಸದ ಬೆಳಗಾವಿಯ ರಿದ್ದಿಸಿದ್ಧಿ ವಿವಿಧೋದ್ದೇಶ ಕೋ–ಆಪ್ ಸೊಸೈಟಿ ಅಧ್ಯಕ್ಷ ಶ್ಯಾಮ ಜಾಧವಗೆ 1 ವರ್ಷ ಜೈಲು ಶಿಕ್ಷೆ ಹಾಗೂ 25 ಸಾವಿರ ರೂ. ದಂಡ ವಿಧಿಸಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ತೀರ್ಪು ಪ್ರಕಟಿಸಿದೆ ಎಂದು ನ್ಯಾಯವಾದಿ ಎನ್.ಆರ್. ಲಾತೂರ್ ತಿಳಿಸಿದರು. ಶುಕ್ರವಾರ ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ

**♦ ಸೊಸೈಟಿ ಅಧ್ಯಕ್ಷ ಶ್ಯಾಮ ಜಾಧವಗೆ ಜೈಲು**
**♦ ಗ್ರಾಹಕರ ಠೇವಣಿ ಮರಳಿಸದಿದ್ದಕ್ಕೆ ಕಠಿಣ ಶಿಕ್ಷೆ**
**♦ ಜಿಲ್ಲಾ ಗ್ರಾಹಕ ಆಯೋಗದಿಂದ ಮಹತ್ವದ ತೀರ್ಪು**
**♦ ನಾಲ್ಕು ಲಕ್ಷ ರೂಪಾಯಿ ಪಾವತಿಗೆ ಆದೇಶ**

ಮಾತನಾಡಿದರು. ಠೇವಣಿ ಅವಧಿ ಮುಗಿದರೂ ಹಣ ಮರಳಿಸುತ್ತಿಲ್ಲ ಎಂದು ಸೊಸೈಟಿ ಗ್ರಾಹಕರಾದ ಸ್ನೇಹಾ ನಾದ ಮತ್ತು ಅವರ ಪುತ್ರಿ ಪರಿಮಳಾ 2023ರಲ್ಲಿ ದೂರು ದಾಖಲಿಸಿದ್ದರು. ಪ್ರಕರಣ ಕುರಿತು



ಗ್ರಾಹಕರ ಪರವಾಗಿ ತೀರ್ಪು ಪ್ರಕಟಿಸಿದ್ದ ಜಿಲ್ಲಾ ಆಯೋಗ, 4 ಲಕ್ಷ ರೂ. ಠೇವಣಿಯನ್ನು ಬಡ್ಡಿ ಸಹಿತ ಪಾವತಿಸುವಂತೆ ಆದೇಶ ನೀಡಿತ್ತು ಎಂದರು.

ಆದೇಶ ಪಾಲಿಸದ ಹಿನ್ನೆಲೆಯಲ್ಲಿ 2026ರಲ್ಲಿ 25 ಸಾವಿರ ರೂ. ದಂಡಸಹಿತ 1 ವರ್ಷ ಜೈಲು ಶಿಕ್ಷೆ ವಿಧಿಸಿತ್ತು. ಈ ತೀರ್ಪಿನ ವಿರುದ್ಧ ಶ್ಯಾಮ ಜಾಧವ, ರಾಜ್ಯ ಆಯೋಗಕ್ಕೆ ಮೇಲ್ಮನವಿ ಸಲ್ಲಿಸಿದ್ದರು. ರಾಜ್ಯ ಆಯೋಗ ಕೂಡ ಫೆ.4ರಂದು ಅರ್ಜಿ ವಜಾಗೊಳಿಸಿ, ಜಿಲ್ಲಾ ಆಯೋಗದ ತೀರ್ಪು ಎತ್ತಿ ಹಿಡಿದಿತ್ತು. ಈಗ ಜಿಲ್ಲಾ ಆಯೋಗ ಮಾ.25ರಂದು ಶ್ಯಾಮ ಜಾಧವಗೆ ಜೈಲು ವಾರಂಟ್ ಹೊರಡಿಸಿದ್ದು, ಆ ಪ್ರಕಾರ ಸೊಸೈಟಿ ಅಧ್ಯಕ್ಷ ಜೈಲು ಪಾಲಾಗಿದ್ದಾರೆ ಎಂದರು.

# ಸಂಘದ ಪ್ರಗತಿ ತಿಳಿಸಿದ ಅಧ್ಯಕ್ಷ ಬಾಳಪ್ಪ ಬೆಳಕೂಡ ಕಲ್ಲೋಳಿಯ ಬಸವೇಶ್ವರ ಸೌಹಾರ್ದ ಸಹಕಾರಿ ಸಂಘಕ್ಕೆ ರೂ.4.82 ಕೋಟಿ ಲಾಭ



ಮೂಡಲಗಿ: ಕಲ್ಲೋಳಿಯ ಶ್ರೀ ಬಸವೇಶ್ವರ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ ಬಾಳಪ್ಪ ಬ. ಬೆಳಕೂಡ ಅವರು ಸಂಘದ ಪ್ರಗತಿ ಬಗ್ಗೆ ವಿವರ ನೀಡುತ್ತಿರುವರು

**ಬೆಳಗಾವಿ ವಾರ್ತೆ ಮೂಡಲಗಿ:** 'ತಾಲ್ಲೂಕಿನ ಕಲ್ಲೋಳಿಯ ಶ್ರೀ ಬಸವೇಶ್ವರ ಸೌಹಾರ್ದ ಸಹಕಾರಿ ಸಂಘವು 2025–26ನೇ ಹಣಕಾಸಿನ ವರ್ಷದ ಕೊನೆಯಲ್ಲಿ ರೂ.4.82 ಕೊಟಿ ಲಾಭ ಗಳಿಸಿ ಪ್ರಗತಿಯಲ್ಲಿ ಸಾಗಿದೆ' ಎಂದು ಸಂಘದ ಅಧ್ಯಕ್ಷ ಬಾಳಪ್ಪ ಬಸಪ್ಪ ಬೆಳಕೂಡ ಅವರು ತಿಳಿಸಿದರು.

ಸಂಘದ ಕಾರ್ಯಾಲಯದಲ್ಲಿ ಶುಕ್ರವಾರ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯದ ಸೌಹಾರ್ದ ಸಹಕಾರಿ ಕಾನೂನು ಅಡಿಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿ, ಶಾಖೆಗಳ ರಹಿತವಾಗಿ ಲಾಭಾಂಶದಲ್ಲಿ ದಾಖಲೆ ಹೊಂದಿರುವ ಸಂಘ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದರು

ಸದ್ಯ ಸಂಘವು ರೂ.78.83 ಲಕ್ಷ ಶೇರು ಬಂಡವಾಳ, ರೂ.27 ಕೋಟಿ ನಿಧಿಗಳು, ರೂ.99.17 ಕೋಟಿ ಠೇವುಗಳು, ರೂ.24.62 ಕೋಟಿ ಗುಂತಾವಣಗಳನ್ನು ಹೊಂದಿದೆ. ವಿವಿಧ ಕ್ಷೇತ್ರಗಳಿಗೆ ರೂ.101.05 ಕೋಟಿ ಸಾಲ ನೀಡಿದೆ, ರೂ.127 ಕೋಟಿ ದುಡಿಯುವ ಬಂಡವಾಳ ಮತ್ತು ರೂ.332 ಕೋಟಿ ಒಟ್ಟು ವ್ಯವಹಾರ ಮಾಡಿದೆ ಎಂದರು.

ಸಂಘವು 35 ವಸಂತಗಳನ್ನು ಪೂರೈಸಿದ್ದು ಪ್ರತಿ ವರ್ಷವೂ ಶೇ.100ರಷ್ಟು ಸಾಲ ವಸೂಲಾತಿ ದಾಖಲೆ ಹೊಂದಿದೆ ಹಾಗೂ ಲೆಕ್ಕಪರಿಶೋಧನೆಯಲ್ಲಿ 'ಅ' ಶ್ರೇಣ ಯ ಶ್ರೇಯಸ್ಸು ಹೊಂದಿದೆ. ಕಳೆದ 26 ವರ್ಷಗಳಿಂದ ಪ್ರತಿ ವರ್ಷವೂ ಶೇ.25ರಷ್ಟು ಲಾಭಾಂಶ ವಿತರಿಸಿ ಗ್ರಾಹಕರ ವಿಶ್ವಾಸ ಹೊಂದಿದೆ. ಮರಣ ಹೊಂದಿದ ಸದಸ್ಯರ ಕುಟುಂಬಕ್ಕೆ ರೂ.10,000 ಹಣ ಮರಣೋತ್ತರ ನಿಧಿ ನೀಡಲಾಗುತ್ತಿದೆ. ಸದಸ್ಯರ ಮಕ್ಕಳು ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಎರಡೂ ವಿಭಾಗದಲ್ಲಿ ತಲಾ ಮೂವರು ವಿದ್ಯಾರ್ಥಿಗಳಿಗೆ ಒಟ್ಟು ರೂ.1.20 ಲಕ್ಷ ಪ್ರೋತ್ಸಾಹ ಹಣವನ್ನು ಹಂಚಲಾಗುತ್ತಿದೆ ಎಂದರು.

ಸಂಘವು ಗ್ರಾಹಕರಿಗೆ ಆರ್‌ಟಿಜಿಎಸ್, ಎನ್‌ಇಎಫ್‌ಟಿ, ಐಎಂಪಿಎಸ್, ಇ–ಸ್ಟಾಂಪ್, ಸೇಫ್ ಲಾಕರ್, ಮಿನಿ ಎಟಿಎಂ ಸೌಲಭ್ಯ ಕಲ್ಪಿಸಿದೆ, ತ್ವರಿತ ಸೇವೆಗೆ ಗಣಕೀಕರಣ, ಎಸಿ ವ್ಯವಸ್ಥೆ ಹೊಂದಿದೆ ಎಂದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಶಿವರುದ್ರ ಬಿ.ಪಾಟೀಲ, ನಿರ್ದೇಶಕರಾದ ಬಸಗೌಡ ಪಾಟೀಲ, ಬಸವಣ್ಣೆಪ್ಪ ಗೋರೋಶಿ, ಮಲ್ಲಪ್ಪ ಖಾನಾಪೂರ, ರಾಮಪ್ಪ ಗದಾಡಿ, ಹಣಮಂತ ಪರಕನಟ್ಟಿ, ಸುಭಾಷ ಖಾನಾಪೂರ, ಬಸಪ್ಪ ಹೆಬ್ಬಾಳ, ಪ್ರಕಾಶ ಕಲಾಲ, ಮಹಮ್ಮದಶಫಿ ಮೋಕಾಶಿ, ಕಲ್ಲೋಳೆಪ್ಪ ತೆಗಳಗಡೆ, ಹಿರಿಯರಾದ ಭೀಮಪ್ಪ ಕಡಾಡಿ, ಬಾಳಣ್ಣ ಕಂಕಣವಾಡಿ, ಪ್ರಧಾನ ವ್ಯವಸ್ಥಾಪಕ ಹಣಮಂತ ಖಾನಗೌಡ್ರ, ಈರಯ್ಯ ಕರಗಾಂವಿಮಠ, ರಮೇಶ ಕವಟಕೊಪ್ಪ, ರಾಮಣ್ಣ ಹೆಬ್ಬಾಳ, ವಿನೋದ ಕುರಬೇಟ ಇದ್ದರು.

# ನೂತನ ಸೇತುವೆ ಕಾಮಗಾರಿಗೆ ಚಾಲನೆ



ಗೋಕಾಕ: ಶಾಸಕ ರಮೇಶ ಜಾರಕಿಹೊಳಿ ಅವರನ್ನು ಸತ್ಕರಿಸುತ್ತಿರುವ ಮಾಲದಿನ್ನಿ ಗ್ರಾಮಸ್ಥರು.

**ಬೆಳಗಾವಿ ವಾರ್ತೆ ಗೋಕಾಕ:** ಜತ್ತ–ಜಾಂಬೋಟಿ ರಾಜ್ಯ ಹೆದ್ದಾರಿಯ ಮುಖ್ಯ ರಸ್ತೆಯಲ್ಲಿ ಕೊಳವಿ ಗ್ರಾಮದ ಬಳಿ ಲೋಕೋಪಯೋಗಿ ಇಲಾಖೆ ವತಿಯಿಂದ ಅಂದಾಜು 960 ಲಕ್ಷ.ರೂ ಮೊತ್ತದ ನೂತನ ಸೇತುವೆ ಕಾಮಗಾರಿಗೆ ಶಾಸಕ ರಮೇಶ ಜಾರಕಿಹೊಳಿ ಗುರುವಾರದಂದು ಚಾಲನೆ ನೀಡಿದರು.

ಶಾಸಕ ರಮೇಶ ಜಾರಕಿಹೊಳಿ ಅವರು ತಾಲೂಕಿನ ಮಾಲದಿನ್ನಿ, ಬೆಣಚಿನಮರಡಿ, ಕೊಳವಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಆಯೋಜಿಸಿದ್ಧ ಹನುಮ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಇದೇ ಸಂದರ್ಭದಲ್ಲಿ ಶಾಸಕರನ್ನು ಹನುಮ ಜಯಂತಿ ಕಾರ್ಯಕ್ರಮ ಆಯೋಜಕರು, ಗ್ರಾಮಸ್ಥರು, ಸತ್ಕರಿಸಿದರು.

ಈ ಸಂದರ್ಭದಲ್ಲಿ ಭೀಮನಗೌಡ ಪೊಲೀಸಗೌಡರ,ಟಿ.ಆರ್ ಕಾಗಲ,ಮಡ್ಡೆಪ್ಪ ತೋಳಿನವರ, ಪುಂಡಲೀಕ ವಣ್ಣೂರ, ಬಸಪ್ಪ ಹಮ್ಮಿಣಿ, ಸಿದ್ದಗೌಡ ಪಾಟೀಲ, ಕರೆಪ್ಪ ಬಡಿಗವಾಡ, ಸಿದ್ದಪ್ಪ ದೇಸಾಯಿ, ಶಿವು ಪಾಟೀಲ ಸೇರಿದಂತೆ ಕೊಳವಿ, ಬೆಣಚಿನಮರ್ಡಿ, ಖನಗಾಂವ, ನಭಾಪುರ ಗ್ರಾಮದ ಗುರುಹಿರಿಯರು, ಮುಖಂಡರು ಉಪಸ್ಥಿತರಿದ್ದರು.

# ಸೇವಾ ಮನೋಭಾವ, ಶಿಸ್ತು ಬೆಳೆಸಲು ಎನ್‌ಎಸ್‌ಎಸ್ ಸಹಕಾರಿ



ಖಿಳೇಗಾಂವ ಗ್ರಾಮದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಸಮಾರೋಪ ಸಮಾರಂಭದಲ್ಲಿ ಅರುಣಕುಮಾರ ಯಲಗುದ್ರಿ ಮಾತನಾಡುತ್ತಿರುವ ಚಿತ್ರ

**ಬೆಳಗಾವಿ ವಾರ್ತೆ ಮೋಳೆ:** ಮಕ್ಕಳಲ್ಲಿ ಸೇವಾ ಮನೋ ಭಾವ, ಶಿಸ್ತು,ಮತ್ತು ರಾಷ್ಟ್ರಪ್ರೇಮ ಬೆಳೆಯ ಲು ಎನ್‌ಎಸ್‌ಎಸ್ ಶಿಬಿರಗಳು ಸಹಕಾ ರಿಯಾಗಿವೆ ಎಂದು ಎಂದು ನೀರಾವರಿ ಇಲಾಖೆಯ ನಿವೃತ್ ಇಂಜನೀಯರ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಿಡಿಎಸ್ ಸದಸ್ಯ ಅರುಣಕುಮಾರ ಯಲಗುದ್ರಿ ಹೇಳಿದರು.

ಅವರು ಕಾಗವಾಡ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಖಿಳೇಗಾಂವ ಗ್ರಾಮದಲ್ಲಿ ಅಥಣಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಏಳು ದಿನಗಳ ಕಾಲ ಏರ್ಪಡಿ ಸಿದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಅವರು ರಾಷ್ಟ್ರೀ ಯ ಸೇವಾ ಯೋಜನೆಯ ಶಿಬಿರದ ಮೂ ಲಕ ಗ್ರಾಮೀಣ ಭಾಗದ ಜನರಲ್ಲಿ ಸ್ವಚ್ಚತೆ, ನೈರ್ಮಲ್ಯ, ನೀರಿನ ಮಹತ್ವ ಮತ್ತು ಆರೋ ಗ್ಯದ ಬಗ್ಗೆ ಜಾಗೃತಿ ಮೂಡಿಸಬಹುದು ಎಂದರು.

ಇಂದಿನ ವಿದ್ಯಾರ್ಥಿಗಳು ನಾಳಿನ ನಾಗರಿಕರಾಗುವುದರಿಂದ, ವಿದ್ಯಾರ್ಥಿ ದಿನದಿಂದಲೇ ದೇಶಭಕ್ತಿ, ರಾಷ್ಟ್ರೀಯತೆ, ಪ್ರಾಮಾಣಿಕತೆ,ನಿಶ್ಚಿತ ಗುರಿ, ನಾಯಕತ್ವದ ಗುಣಗಳು, ಪ್ರಯತ್ನಶೀಲೆಯಂತಹ ಗುಣಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಮಾಡುವುದನ್ನು ಕಲಿಸುತ್ತದೆ ಎಂದು ಅರುಣಕುಮಾರ ಯಲಗುದ್ರಿ ಹೇಳಿದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ವಿಲಾಸ ಕಾಂಬಳೆ ವಹಿಸಿ ಮಹಾತ್ಮಾ ಗಾಂಧೀಜಿಯವರ ಕನಸಿನ ಕೂಸಾದ ಸ್ವಚ್ಚತೆಯನ್ನು ವಿದ್ಯಾರ್ಥಿಗಳು ಸದಾ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

ಸಮಾರಂಭದಲ್ಲಿ ಮುರುಗೇಶ ಬಾಣಿ, ಕಿರಣ ತಗಲಿ, ಮಾತನಾಡಿದರು. ವೇದಿಕೆಯ ಮೇಲೆ ಜನೇಂದ್ರ ಬಣಜಬವಾಡ, ಡಾ,ಹರೀಶ ಬಿ. ಪ್ರಾಧ್ಯಾಪಕರಾದ ಪದ್ಮಶ್ರೀ,ಬಿ. ಶಿವಾನಂದ ಹೊಸಮನಿ, ಡಾ, ಮಲ್ಲಪ್ಪ ಸಲಗರೆ, ಡಾ.ಎಂ.ಎ.ಚನ್ನಾಪೂರ, ವೇದಿಕೆಯ ಮೇಲಿದ್ದು ಮಾತನಾಡಿದರು

# ಜನಗಣತಿ ಸ್ವಯಂ ನೋಂದಣಿ ಕಾರ್ಯಾಗಾರ
# ಯೋಜನೆ ಸರಿಯಾಗಿ ರೂಪಿಸಿದಾಗ ಅನುಷ್ಟಾನ ಸರಳವಾಗುವುದು




**ಬೆಳಗಾವಿ ವಾರ್ತೆ ಗದಗ:** ದೇಶದ ಜನಸಂಖ್ಯೆ, ಸಾಮಾಜಿಕ ಸ್ಥಿತಿಗತಿಗಳ ಮಾಹಿತಿಯನ್ನು ಪ್ರತಿ 10 ವರ್ಷಕ್ಕೊಮ್ಮೆ ಸರ್ಕಾರವು ಸಂಗ್ರಹಿಸುವ ಪ್ರಕ್ರಿಯೆಯೇ ಜನಗಣತಿ ಪ್ರಕ್ರಿಯೆಯಾಗಿದೆ. ಇದು ದೇಶದಲ್ಲಿ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಸಹಾಯಕವಾಗುತ್ತದೆ. ಯೋಜನೆಗಳನ್ನು ಸರಿಯಾಗಿ ರೂಪಿಸಿದಾಗ ಅಭಿವೃದ್ಧಿ ಕಾರ್ಯಗಳ ಅನುಷ್ಟಾನವು ಸರಳವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧ'ರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಗುರುವಾರ ಭಾರತೀಯ ಜನಗಣತಿ 2026–2027ಕ್ಕೆ ಸಂಬಂಧಿಸಿದಂತೆ ಜನಗಣತಿ ಸ್ವಯಂ ನೋಂದಣಿ ಜಾಗೃತಿ ಮೂಡಿಸುವ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

2021 ರ ಜನಗಣತಿಯನ್ನು ಕೋವಿಡ್ ಕಾರಣದಿಂದ ವಿಳಂಬವಾಗಿದ್ದು ಭಾರತ ಜನಗಣತಿ 2027 ಪ್ರಾರಂಭವಾಗಿದ್ದು ಸಾರ್ವಜನಿಕರು ಅಧಿಕೃತ ಪೋರ್ಟಲ್ http://se.census.gov.in ಪೋರ್ಟಲ್ ನಲ್ಲಿ ಲಾಗಿನ್ ಆಗಿ ತಮ್ಮ ಮನೆಯ ವಿವರ, ವಾಹನ , ಉದ್ಯೋಗ ಮುಂತಾದ ವಿವರಗಳನ್ನು ಏಪ್ರಿಲ್ 15 ರವರಗೆ ಭರ್ತಿ ಮಾಡಿದಾಗ ನಿಮಗೆ ಸ್ವಯಂ ಗಣತಿ ಗುರುತಿನ ಸಂಖ್ಯೆ (ಐಡಿ) ಲಭ್ಯವಾಗುತ್ತದೆ. ಗಣತಿದಾರರು ತಮ್ಮ ಮನೆಗೆ ಬಂದಾಗ ಈ ಐಡಿ ಸಂಖ್ಯೆ ಯನ್ನು ಒದಗಿಸಿದಾಗ ಗಣತಿ ಪ್ರಕ್ರಿಯೆ ತ್ವರಿತವಾಗಿಸಲು ಸಹಾಯಕವಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಪ್ರಾಸ್ತಾವಿಕವಾಗಿ ಮಾತನಾಡಿ ಈ ಬಾರಿಯ ಜನಗಣತಿಯಲ್ಲಿ ಸಾರ್ವಜನಿಕರು ಖುದ್ದಾಗಿ ಪೋರ್ಟಲ್ ಮೂಲಕ ಮಾಹಿತಿ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಏಪ್ರಿಲ್ 15 ರವರೆಗೆ ಸಾರ್ವಜನಿಕರು ಈ ಸೌಲಭ್ಯ ಬಳಸಿಕೊಳ್ಳಬಹುದು. ಏಪ್ರಿಲ್ 16 ರಿಂದ ಮೇ 15 ರ ಒಂದು ತಿಂಗಳ ಅವಧಿಯಲ್ಲಿ ನಿಯೋಜಿಸಿದ ಗಣತಿದಾರರು ಮೊದಲ ಹಂತದಲ್ಲಿ ಮನೆ ಪಟ್ಟಿ ಕಾರ್ಯಾಚರಣೆ ನಡೆಸುವರು.

ಜನಗಣತಿ ಕಾರ್ಯವು ಮೊದಲ ಹಂತದಲ್ಲಿ ಮನೆ ಗಣತಿ ಕೈಗೊಳ್ಳಲಾಗುತ್ತಿದ್ದು 150 ರಿಂದ 200 ಕುಟುಂಬಗಳು ಅಥವಾ ಅಂದಾಜು 700– 800 ಜನಸಂಖ್ಯೆಗೆ ಅನುಗುಣವಾಗಿ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಒಂದು ಗಣತಿ ಬ್ಲಾಕ್ ರಚಿಸಲಾಗಿದೆ. ಗ್ರಾಮಾಂತರ ಪ್ರದೇಶದಲ್ಲಿ ಗ್ರಾಮ ಆಡಳಿತಾಧಿಕಾರಿಗಳು, ರಾಜಸ್ವ ನಿರೀಕ್ಷಕರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ಕರ ವಸೂಲಿಗಾರರು, ಜಲಗಾರರು, ನಗರ ಪ್ರದೇಶದಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿ/ ಸಿಬ್ಬಂದಿಗಳು ಗ್ರಾಮ, ವಾರ್ಡ ತಾಲೂಕು ವಿಭಾಗದಂತೆ ಬ್ಲಾಕ್ ರಚನೆಯ ಕಾರ್ಯನಿರ್ವಹಿಸಿರುತ್ತಾರೆ. ಜಿಲ್ಲೆಯಲ್ಲಿ ಎಲ್ಲ ತಾಲೂಕುಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಸೇರಿ ಒಟ್ಟು 1905 ಗಣತಿ ಬ್ಲಾಕ್ ಗಳು ರಚನೆಯಾಗಿವೆ.

ಗದಗ 658. ನರಗುಂದ–175, ಶಿರಹಟ್ಟಿ– 160, ಮುಂಡರಗಿ–242, ಗಜೇಂದ್ರಗಡ–228, ಲಕ್ಷ್ಮೆ ??ಶ್ವರ–196, ರೋಣ –246 ಸೇರಿದಂತೆ 1905 ಗಣತಿ ಬ್ಲಾಕ್ ಗಳು ರಚನೆಯಾಗಿವೆ.

ಈ ಜನಗಣತಿಯಲ್ಲಿ ಪ್ರತ್ಯೇಕವಾಗಿ 90 ಕೊಳಗೇರಿ ಪ್ರದೇಶಗಳನ್ನು ಗುರುತಿಸಲಾಗಿದೆ.

ಗಣತಿ ಕಾರ್ಯಕ್ಕೆ ಶಿಕ್ಷಣ ಇಲಾಖೆಯ ಶಿಕ್ಷಕರು ( ಸರ್ಕಾರಿ ಮತ್ತು ಅನುದಾನಿತ ) ಶಿಶು ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಮೇಲ್ವಿಚಾರಕರು, ಆರೋಗ್ಯ ಇಲಾಖೆಯ ಆಶಾ ಕಾರ್ಯಕರ್ತರು, ನಿಲಯ ಮೇಲ್ವಿಚಾರಕರು ಮತ್ತು ಇತರೇ ಇಲಾಖೆಯ ಪ್ರಥಮ ಮತ್ತು ದ್ವಿತೀಯ ದರ್ಜೆಯ ಸಹಾಯಕರು/ ಸಿಬ್ಬಂದಿಗಳನ್ನು ಗಣತಿದಾರರನ್ನಾಗಿ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರು/ ಶಿಕ್ಷಣ ಇಲಾಖೆಯ ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯೋಪಾಧ್ಯಾಯರು ಮತ್ತು ಅಧಿಕಾರಿಗಳನ್ನು ಕನಿಷ್ಠ 6 ಜನ ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನಾಗಿ ನಿಯೋಜಿಸಲಾಗಿದೆ.

ಗ್ರಾಮೀಣ ಪ್ರದೇಶದಲ್ಲಿ 298 ಮೇಲ್ವಿಚಾರಕರು, 1480 ಗಣತಿದಾರರು, 1205 ಎಚ್ ಎಲ್ ಬಿಗಳು ಕಾರ್ಯನಿರ್ವಹಿಸಲಿದ್ದಾರೆ. ಪಟ್ಟಣ ಪ್ರದೇಶದಲ್ಲಿ 134 ಮೇಲ್ವಿಚಾರಕರು, 744 ಗಣತಿದಾರರು , 701 ಎಚ್ ಎಲ್ ಬಿಗಳು ಕಾರ್ಯನಿರ್ವಹಿಸಲಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿಗಳು ವಿವರಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಬಿ.ಜಿ.ಗಿರಿತಿಮ್ಮಣ್ಣವರ ಅವರು ಸ್ವಯಂ ಎಣಿಕೆದಾರರು ತಮ್ಮ ಮಾಹಿತಿಯನ್ನು ಅಪ್‌ಲೋಡ್ ಮಾಡುವ ಕುರಿತು ಪಿ.ಪಿ.ಟಿ. ಮೂಲಕ ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ತಮ್ಮ ಮೊಬೈಲ್ ಮೂಲಕ ಸ್ವಯಂ ಗಣತಿ ದಾಖಲಾತಿ ಪೂರ್ಣಗೊಳಿಸಿದರು. ಕಿತ್ತೂರು ಕರ್ನಾಟಕ ಪತ್ರಿಕೆಯ ಸಂಪಾದಕರಾದ ಮಂಜುನಾಥ ಬಸಪ್ಪ ಅಬ್ಬಿಗೇರಿ ಅವರು ತಮ್ಮ ಮೊಬೈಲ್ ಮೂಲಕ ಸ್ವಯಂ ಗಣತಿ ದಾಖಲಾತಿ ಪೂರ್ಣಗೊಳಿಸಿದರು.

ಈ ಸಂದರ್ಭದಲ್ಲಿ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಕುಲಪತಿ (ಪ್ರಭಾರ) ಮತ್ತು ಕುಲಸಚಿವ ಪ್ರೊ. ಡಾ. ಸುರೇಶ ವಿ. ನಾಡಗೌಡ್ರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ.ಕಂಬಾಳಿಮಠ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಬಸವರಾಜ ಪಾಟೀಲ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ, ಜಿ.ಪಂ. ಅಧಿಕಾರಿ ಎಂ.ವಿ. ಚಳಗೇರಿ ಜನಗಣತಿ ಜಿಲ್ಲಾ ನೋಡಲ್ ಅಧಿಕಾರಿ ರಂಜಿತ್ ಜಾಲಾ, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

# ಸಂಯಮ ಪ್ರಶಸ್ತಿ ಪ್ರದಾನ ಕಾರ್ಯಕ್ರಮ




**ಬೆಳಗಾವಿ ವಾರ್ತೆ ಗದಗ:** ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ವತಿಯಿಂದ ನೀಡಲಾಗುವ ಪ್ರತಿಷ್ಠಿತ "ಸಂಯಮ ಪ್ರಶಸ್ತಿ" ಪ್ರದಾನ ಕಾರ್ಯಕ್ರಮ ಬೆಂಗಳೂರು ನಗರದ ಗಾಂಧಿ ಭವನದಲ್ಲಿರುವ ಮಹದೇವ ದೇಸಾಯಿ ಸಭಾಂಗಣದಲ್ಲಿ ನಡೆಯಿತು.

2023ನೇ ಸಾಲಿನ ಸಂಯಮ ಪ್ರಶಸ್ತಿಯನ್ನು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, 2024ನೇ ಸಾಲಿನ ಸಂಯಮ ಪ್ರಶಸ್ತಿಯನ್ನು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ್ ಹಾಗೂ 2025ನೇ ಸಾಲಿನ ಸಂಯಮ ಪ್ರಶಸ್ತಿಯನ್ನು ಕರ್ನಾಟಕ ಗಾಂಧೀ ಸ್ಮಾರಕ ನಿಧಿಯ ಅಧ್ಯಕ್ಷರಾದ ನಾಡೋಜ ಡಾ.ವೂಡೇ ಪಿ.ಕೃಷ್ಣ ರವರಿಗೆ ನೀಡಿ ಗೌರವಿಸಲಾಯಿತು.

ಈ ಸಮಾರಂಭದಲ್ಲಿ, ಕರ್ನಾಟಕ ಸರ್ಕಾರದ ಮಾನ್ಯ ಸಾರಿಗೆ ಮತ್ತು ಮುಜರಾಯಿ ಇಲಾಖೆಯ ಸಚಿವರಾದ ರಾಮಲಿಂಗರೆಡ್ಡಿ, ಕರ್ನಾಟಕ ಸರ್ಕಾರದ ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ.ಪಾಟೀಲ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಮಾನ್ಯ ಅಧ್ಯಕ್ಷರಾದ ಶರಣಪ್ಪ ಸಲಾದಪುರ, ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿಯಾದ ಬಿ.ಬಿ.ಕಾವೇರಿ ಸೇರಿದಂತೆ



ಹುಬ್ಬಳ್ಳಿ ನವನಗರದ ಶ್ರೀ ಸಾಯಿ ಬಿಎಡ್ ಕಾಲೇಜು ಸಭಾ ಭವನದಲ್ಲಿ ನಡೆದ ಡಾ. ರಾಮು ಮೂಲಗಿ ರಚಿಸಿದ ಲಲಿತ ಪ್ರಬಂಧ 'ಮಣ್ಣು ಪೂಜೆಗಳ' ಕುರಿತ ವಿಚಾರ ಸಂಕಿರಣ ಹಾಗೂ ರಾಮಣ್ಣ ಮಾಸ್ತರ ಕಿರುಚಿತ್ರ ಬಿಡುಗಡೆ ಸಮಾರಂಭವನ್ನು ಡಾ. ಹಿ.ಶಿ. ಬೋರಲಿಂಗಯ್ಯ ಉದ್ಘಾಟಿಸಿದರು. ಆರ್. ಎಸ್. ಹೊಸೂರ, ಬಸವರಾಜ ಸುಳ್ಳದ, ಶಾಂತಣ್ಣ ಕಡಿವಾಲ, ವಿ.ಜಿ. ಪಾಟೀಲ, ಬಿ.ಐ. ಈಳಗೇರ, ಕೃಷ್ಣಮೂರ್ತಿ ಕುಲಕರ್ಣಿ, ಸುಭಾಸ ಅಂಚಿ, ವೀರೇಶ ಹಂಡಗಿ, ಗುರುಸಿದ್ದಪ್ಪ ಎಂ. ಬಡಿಗೇರ, ಮಲ್ಲಿಕಾರ್ಜುನ ಕಮ್ಮಾರ, ವಸಂತ ಅಗಸಿಮನಿ ಮತ್ತಿತರರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ 3ನೇ ಭಾಷೆಗೆ ಗ್ರೇಡಿಂಗ್ ವ್ಯವಸ್ಥೆ ಸ್ವಾಗತಾರ್ಹ : ಶಬ್ಬೀರ ಸಾತಬಚ್ಚೆ



**ಬೆಳಗಾವಿ ವಾರ್ತೆ ಅಥಣಿ:** ರಾಜ್ಯದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಮೇಲಿನ ಶೈಕ್ಷಣಿಕ ಒತ್ತಡವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಯಲ್ಲಿ ಹಿಂದಿ ಮೂರನೇ ಭಾಷೆಗೆ ಗ್ರೇಡಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ನಿರ್ಧರಿಸಿರುವುದು ಅತ್ಯಂತ ಸ್ವಾಗತಾರ್ಹ ಮತ್ತು ವಿದ್ಯಾರ್ಥಿ ಸ್ನೇಹಿ ಕ್ರಮವಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಅಥಣಿ ತಾಲೂಕು ಅಧ್ಯಕ್ಷ ಶಬ್ಬೀರ ಸಾತಬಚ್ಚೆ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಮೂರನೇ ಭಾಷೆ ಹಿಂದಿ ಪರೀಕ್ಷೆಯ ದೃಷ್ಟಿಯಿಂದ ಕೆಲವೊಮ್ಮೆ ಸವಾಲಾಗಿ ಪರಿಣಮಿಸುತ್ತಿತ್ತು. ಈಗ ಸರ್ಕಾರ ಈ ವಿಷಯಕ್ಕೆ ಅಂಕಗಳ ಬದಲಾಗಿ ಗ್ರೇಡಿಂಗ್ ವ್ಯವಸ್ಥೆ ಜಾರಿಗೆ ತರುತ್ತಿರುವುದು ವಿದ್ಯಾರ್ಥಿಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡಲಿದೆ. ಇದರಿಂದ ವಿದ್ಯಾರ್ಥಿಗಳು ಇತರ ಪ್ರಮುಖ ಪಠ್ಯದ ವಿಷಯಗಳತ್ತ ಹೆಚ್ಚಿನ ಗಮನ ಹರಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಶಿಕ್ಷಣ ಕ್ಷೇತ್ರದಲ್ಲಿ ಇಂತಹ ಸುಧಾರಣೆಗಳು ಅತ್ಯಗತ್ಯ. ಕೇವಲ ಅಂಕಗಳ ಬೆನ್ನತ್ತದೆ ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಪೂರಕವಾದ ವಾತಾವರಣ ನಿರ್ಮಿಸಲು ಸರ್ಕಾರದ ಈ ಕ್ರಮ ಸಹಕಾರಿಯಾಗಿದೆ. ಈ ನಿರ್ಧಾರವು ಲಕ್ಷಾಂತರ ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ಕಾಯ್ದಿದೆ," ಎಂದು ಶಬ್ಬೀರ ಸಾತಬಚ್ಚೆ ಸರ್ಕಾರದ ಕ್ರಮವನ್ನು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

# ಗದಗದಲ್ಲಿ ಪೊಲೀಸ್ ಧ್ವಜ ದಿನಾಚರಣೆ: ಸಮಾಜ ಸ್ವಾಸ್ಥ ಕಾಪಾಡುವಲ್ಲಿ ಪೊಲೀಸರ ಪಾತ್ರ ಮಹತ್ವದ್ದು




**ಬೆಳಗಾವಿ ವಾರ್ತೆ ಗದಗ:** ಗದಗ ಜಿಲ್ಲಾ ಪೊಲೀಸ್ ಇಲಾಖೆಯು ವತಿಯಿಂದ ಗುರುವಾರ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನ (ಪಿ.ಎಚ್.ಕ್ಯೂ), ಮಲ್ಲಸಮುದ್ರದಲ್ಲಿ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮವನ್ನು ಶಿಸ್ತಿನಿಂದ ಹಾಗೂ ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಎ.ಎಸ್.ಐ ಎಚ್.ಡಿ. ಗಡಾದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ಪೊಲೀಸ್ ಇಲಾಖೆ ಸಮಾಜದ ಶಾಂತಿ, ಸುವ್ಯವಸ್ಥೆ ಮತ್ತು ಭದ್ರತೆಯನ್ನು ಕಾಪಾಡುವ ಪ್ರಮುಖ ಕಂಬವಾಗಿದೆ ಎಂದರು.

ಅಪರಾಧ ನಿಯಂತ್ರಣ, ಕಾನೂನು ಸುವ್ಯವಸ್ಥೆ ಕಾಪಾಡುವುದು ಮಾತ್ರವಲ್ಲದೆ, ಜನರಲ್ಲಿ ಭದ್ರತಾ ಭಾವನೆ ಮೂಡಿಸುವುದು ಪೊಲೀಸರ ಪ್ರಮುಖ ಕರ್ತವ್ಯವಾಗಿದೆ. ಇದನ್ನು ಇಲಾಖೆ ಶಿಸ್ತು ಬದ್ಧವಾಗಿ ನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ರೋಹನ್ ಜಗದೀಶ್ ಅವರು ಮಾತನಾಡಿ, ಪೊಲೀಸ್ ಧ್ವಜ ದಿನಾಚರಣೆಯ ಉದ್ದೇಶ ಮತ್ತು ಮಹತ್ವವನ್ನು ವಿವರಿಸುತ್ತಾ, ದಿಕ 15/01/1965 ರಿಂದ ಧ್ವಜ ದಿನಾಚರಣೆ ಮಾಡುತ್ತಾ ಬಂದಿದೆ. ಪೊಲೀಸ್ ಇಲಾಖೆ ಕಾಯ್ದೆ ಜಾರಿಗೆ ಬಂದ ಹಿನ್ನೆಲೆಯಲ್ಲಿ ಧ್ವಜ ದಿನಾಚರಣೆ ನಡೆದುಬಂದಿದೆ. ಸೇನೆಗೆ ಇದ್ದಂತೆ ಪೊಲೀಸ್ ಇಲಾಖೆಯಲ್ಲಿ ಸಹ ಧ್ವಜದಿನಾಚರಣೆ ನಡೆಯುತ್ತಿದೆ ಎಂದರು.

ನಿವೃತ್ತ ಪೊಲೀಸ್ ಅಧಿಕಾರಿಗಳನ್ನು ಗೌರವಿಸುವ ರೂಡಿನಡೆದುಬಂದಿದೆ. ಪೊಲೀಸ್ ಧ್ವಜಾರಾಟಮಾಡಿ ಬಂದ ಹಣದಲ್ಲಿ ಶೇ. 50 ರಷ್ಟು ಕೇಂದ್ರ ಮಿಸಲು ಪಡೆಗೆ ಹಾಗೂ ಶೇ. 50 ರಷ್ಟು ಹಣವನ್ನು ರಾಜ್ಯದ ನಿವೃತ್ತ ಪೋಲಿಸ್ ನಿಧಿಗೆ ಬಳಕೆ ಮಾಡಲಾಗುತ್ತಿದೆ ಇದರಿಂದ ಅನೇಕರಿಗೆ ಸಹಾಯಾಡಲಾಗುತ್ತಿದೆ ಎಂದು ತಿಳಿಸಿದರು.

ಪೊಲೀಸ್ ಧ್ವಜವು ಶೌರ್ಯ, ತ್ಯಾಗ ಮತ್ತು ಕರ್ತವ್ಯನಿಷ್ಠೆಯ ಸಂಕೇತವಾಗಿದ್ದು, ಈ ದಿನದ ಆಚರಣೆ ಮೂಲಕ ಪೊಲೀಸ್ ಸಿಬ್ಬಂದಿಯಲ್ಲಿ ಸೇವಾಭಾವನೆ, ಶಿಸ್ತಿನ ಮೌಲ್ಯಗಳು ಮತ್ತು ದೇಶಭಕ್ತಿಯನ್ನು ಮತ್ತಷ್ಟು ಬಲಪಡಿಸಲಾಗುತ್ತದೆ ಎಂದರು.

ಸಮಾಜದ ಸ್ವಾಸ್ಥ ಕಾಪಾಡುವಲ್ಲಿ ಪೊಲೀಸರ ಪಾತ್ರ ಅತ್ಯಂತ ಮಹತ್ವದ್ದಾ ಗಿದೆ. ಅಪರಾಧಗಳನ್ನು ತಡೆಗಟ್ಟುವುದು, ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವುದು, ತುರ್ತು ಪರಿಸ್ಥಿತಿಗಳಲ್ಲಿ ತಕ್ಷಣ ಸ್ಪಂದಿಸುವುದು, ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗೆ ಕ್ರಮ ಕೈಗೊಳ್ಳುವುದು ಸೇರಿದಂತೆ ಹಲ ವಾರು ಸೇವೆಗಳ ಮೂಲಕ ಪೊಲೀಸರು ಸಮಾಜದ ನೈತಿಕ ಮತ್ತು ಸಾಮಾಜಿಕ ವ್ಯವಸ್ಥೆಯನ್ನು ಸ್ಥಿರವಾಗಿಡಲು ಶ್ರಮಿಸುತ್ತಿದ್ದಾರೆಂದು ಹೇಳಿದರು.

ಕೋವಿಡ್ ಸೇರಿದಂತೆ ಅನಾಹುತ ಸಂದರ್ಭಗಳಲ್ಲಿಯೂ ಪೊಲೀಸ್ ಸಿಬ್ಬಂದಿ ಮುಂಚೂಣಿಯಲ್ಲಿ ಕಾರ್ಯನಿರ್ವಹಿಸಿ ಜನರ ರಕ್ಷಣೆಗೆ ತಮ್ಮ ಜೀವವನ್ನೇ ಪಣಕ್ಕಿಟ್ಟ ಉದಾಹರಣೆಗಳು ಸಾಕಷ್ಟಿವೆ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ರೋಹನ್ ಜಗದೀಶ್ ನುಡಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಮಹಾಂತೇಶ ಸಜ್ಜನರ, ನರಗುಂದ ಡಿ ವೈ ಎಸ್ ಪಿ ಪ್ರಭು ಗೌಡ ಕೆರೆದಳ್ಳಿ, ಮಹನಿಯರಾದ ಸಂಜನಾ ರೋಹನ್ ಜಗದೀಶ್, ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಎಸ್ ಎನ್ ಬಳ್ಳಾರಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಹಲವು ಹಿರಿಯ ಹಾಗೂ ಕಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದು, ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

# ಕರ್ನಾಟಕ ವಿಶ್ವವಿದ್ಯಾಲಯದಿಂದ ವೀರೇಶ ಜಿ. ಹಿರೇಮಠ ಅವರಿಗೆ ಪಿಎಚ್.ಡಿ ಪ್ರಧಾನ



**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ವಿಶ್ವವಿದ್ಯಾ ಲಯ ವಿಜ್ಞಾನ ಮತ್ತು ತಂತ್ರಜ್ಞಾನ ನಿಖಾ ಯದ ಭೌತಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಸಂಶೋಧನಾ ವಿದ್ಯಾರ್ಥಿಯಾಗಿದ್ದ ವೀರೇಶ ಗುರುಸಿದ್ದಯ್ಯ ಹಿರೇಮಠ ಅವರು ಕರ್ನಾಟಕ ವಿಶ್ವವಿದ್ಯಾಲಯಕ್ಕೆ ಮಂಡಿಸಿದ್ದ, ಸಿಂಥೆಸಿಸ್ ಆಂಡ್ ಕ್ಯಾರಕ್ಟರೆಜೇಶನ್ ಆಫ್ ಸಮ್ ರೇರ್ ಅರ್ಥಡೊಪ್ಸ್ ಫೆರೆಟ್ ನ್ಯಾನೊಪಾರ್ಟಿಕಲ್ಸ್ ಫಾರ್ ಸೆನ್ಸರ್ ಅಪ್ಲಿ ಕೇಶನ್ಸ್ ( Title of the thesis: Synthesis and Characterisation of Some Rare Earth Doped Ferrite Nanoparticles for Sensor Applications) ವಿಷಯ ಕುರಿತು ಸಲ್ಲಿಸಿದ್ದ ಸಂಶೋಧನಾ ಮಹಾಪ್ರಬಂಧಕ್ಕೆ ಏಪ್ರಿಲ್ 2, 2026 ರಂದು ಕರ್ನಾಟಕ ವಿಶ್ವವಿದ್ಯಾ ಲಯವು ಪಿಎಚ್.ಡಿ ಪದವಿ ಪ್ರಧಾನ ಮಾಡಿದೆ. ಕರ್ನಾಟಕ ವಿಶ್ವವಿದ್ಯಾಲಯ ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯ ವಿಭಾಗದ ಭೌತ ಶಾಸ್ತ್ರ ಪ್ರಾಧ್ಯಾಪ ಡಾ. ಜಿ.ಎಚ್. ಮಳಿಮಠ ಅವರು ಮಾರ್ಗ ದರ್ಶನ ಮಾಡಿದ್ದಾರೆ. ಪ್ರಸ್ತುತ ಡಾ. ವಿರೇಶ ಗುರುಸಿದ್ದಯ್ಯ ಹಿರೇಮಠ ಅವರು ಕೆಎಲ್‌ಇ ಸಂಸ್ಥೆಯ ಹುಬ್ಬಳ್ಳಿಯ ಪಿ.ಸಿ. ಜಾಬಿನ ವಿಜ್ಞಾನ ಮಹಾ ವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪ ಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಸಾಧನೆಗೆ ಕೆಎಲ್‌ಇ ಸಂಸ್ಥೆಯ ಚೇರ್ಮನ್ ಅಮೀತ ಕೋರೆ, ಕಾಲೇಜು ಪ್ರಾಚಾರ್ಯರಾದ ಡಾ.ಸಂದ್ಯಾ ಕುಲಕರ್ಣಿ ಸೇರಿದಂತೆ ಕಾಲೇಜು ಪ್ರಾಧ್ಯಾ ಪಕರು, ಸಿಬ್ಬಂದಿ, ಅಭಿನಂದಿಸಿದ್ದಾರೆ.

# ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ರಾಜ್ಯ ಪದಾಧಿಕಾರಿಗಳ ಆಯ್ಕೆ

**ಬೆಳಗಾವಿ ವಾರ್ತೆ ವಿಜಯಪುರ :** ರಾಜ್ಯದ ಒಟ್ಟು 31 ಜಿಲ್ಲೆಯ ಸುಮಾರು 23,720 ಬೆಳೆ ಸಮೀಕ್ಷೆದಾರರುಗಳಿದ್ದು ಅವರೆಲ್ಲರ ಶ್ರೇಯೋಭಿವೃದ್ಧಿಗಾಗಿ ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷರಾದ ನರಸಪ್ಪ ಅರ್ಜುನ ನಾವಿ ಅವರು ಈ ಸಂಘಟನೆಯನ್ನು ಹುಟ್ಟು ಹಾಕಿ ಮಂಗಳವಾರ ನಗರದಲ್ಲಿ ನಡೆದ ಸಭೆಯಲ್ಲಿ ಈ ಕೆಳಗಿನ ಹುದ್ದೆಗಳನ್ನು ಕೊಡುವುದರ ಮೂಲಕ ಸಂಘಟನೆಯನ್ನು ಹಾಗೂ ಸಂಘದ ಪದಾಧಿಕಾರಿಗಳ ಹಿತ ಕಾಪಾಡುವುದೇ ಮೂಲ ಉದ್ದೇಶ, ಈಡೀ ರಾಜ್ಯದಲ್ಲಿ ಕೇವಲ 2–3 ತಿಂಗಳು ಮಾತ್ರ ಕೆಲಸಕ್ಕೆ ಬಳಸಿಕೊಂಡು ನಂತರ ನಮ್ಮನ್ನು ಕೈಬೀಡುವುದರಿಂದ ಕೆಲಸವಿಲ್ಲದೇ ನಮ್ಮನ್ನು ನಂಬಿದ ಕುಟುಂಬ ಸಂಕಷ್ಟಕ್ಕೆ ಇಡಾಗುತ್ತಿವೆ, ಆದ್ದರಿಂದಲೇ ಈ ಸಂಘವನ್ನು ನಿರ್ಮಿಸುವುದರ ಮೂಲಕ ರಾಜ್ಯವ್ಯಾಪಿ ಸಂಘಟನೆಯ ಪರವಾಗಿ ಸರಕಾರದ ಗಮನಕ್ಕೆ ತರುವುದರ ಮೂಲಕ ನಮ್ಮ ಹಕ್ಕನ್ನು ನಾವೂ ಪಡೆದುಕೊಳ್ಳಲು ಸಹಾಯಕವಾಗಲಿದೆ ಎಂದರು.

ಈ ಕೆಳಗಿನ ಪದಾಧಿಕಾರಿಗಳಿಗೆ ಆದೇಶಪ್ರತಿ ನೀಡುವ ಮೂಲಕ ಸಂಘದ ಗುರಿ, ಉದ್ದೇಶವನ್ನು ಮುಂದಿನ ಸಂಘದ ನಡೆಯನ್ನು, ಹೋರಾಟದ ಹಾದಿಯ ಕುರಿತು ಎಲ್ಲರನ್ನು ಒಡಗೂಡಿ ಹೋರಾ ಟದ ಕುರಿತು ರೂಪರೇಷ ತಾಯರಿಸಲು ಬಹು ದೊಡ್ಡ ನಿರ್ಣಯವನ್ನು ನಮ್ಮ ಸಂಘಟನೆಯಿಂದ ಮಾಡೋಣ ಎಂದು ಸಂಸ್ಥಾಪಕರಾದ ನರಸಪ್ಪ ನಾವಿ ವರು ಹೇಳಿದರು.

ರಾಜ್ಯಾಧ್ಯಕ್ಷರಾಗಿ ಭೀಮಪ್ಪ ಲಕ್ಷ್ಮಣ ತಳವಾರ, ಉಪಾಧ್ಯಕ್ಷರಾಗಿ ಬಳ್ಳಾರಿಯ ವಿರೇಶ ಗಾದಿಲಿಂಗಪ್ಪ ಎ, ಪ್ರಧಾನ ಕಾರ್ಯದರ್ಶಿಗಳಾಗಿ ಕಲಬುರಗಿಯ ರಾಜಕುಮಾರ ಶಂಕರ, ಸಹ ಕಾರ್ಯದರ್ಶಿಯಾಗಿ ದಾವಣಗೇರೆಯ ಮಂಜುನಾಥ ಟಿ.ಹೆಚ್, ಖಜಾಂಜಿಯಾಗಿ ಬಾಗಲಕೋಟಿಯ ಬಸವರಾಜ ಸಿದ್ದಪ್ಪ ಹೊಳೆದಾಸರ,



ಸಹ ಖಜಾಂಚಿಯಾಗಿ ಉಡುಪಿಯ ಪ್ರಕಾಶ ಉಮೇಶ ಆಚಾ ರ್ಯ, ಸಂಘಟನಾ ಕಾರ್ಯದರ್ಶಿ ಯಾ ಗಿ ಹಾವೇರಿಯ ನಾಗರಾಜ ಬಸವಣ್ಣೆಪ್ಪ ಪೂಜಾರ, ಸಹ ಸಂಘಟನಾ ಕಾರ್ಯದರ್ಶಿ ಯಾಗಿ ವಿಜಯನಗರದ ದೇವೇಂದ್ರಪ್ಪ ಪ ಹಿರೇಹ'ಡಗಲಿ, ಸಂಚಾಲಕ ರನ್ನಾಗಿ ಬೆಂಗಳೂರಿನ ಸಿದ್ದೇಗೌಡ ಸಿದ್ಧಮಲ್ಲಯ್ಯ ಹಾಗೂ ಇನ್ನೊರ್ವ ಸಹಸಂಚಾಲಕರನ್ನಾಗಿ ಚಿಕ್ಕಮಂಗಳೂರಿನ ಚಂದ್ರಶೇಖರ ಎಮ್.ಸಿ ಅವರನ್ನು ಆಯ್ಕೆ ಮಾಡಿ ಆದೇಶ ಪ್ರತಿ ನೀಡಲಾಯಿತು.

# ಜಿಲ್ಲಾ ಪೊಲೀಸ್ ಇಲಾಖೆಯಿಂದ ಪೊಲೀಸ್ ಧ್ವಜ ದಿನಾಚರಣೆ
# ವೃತ್ತಿಯಲ್ಲಿನ ಶಿಸ್ತು, ಸಂಯಮ, ಸಮಯ ಪ್ರಜ್ಞೆ ನಮ್ಮ ಗೌರವ ಹೆಚ್ಚಿಸುತ್ತದೆ

**ಬೆಳಗಾವಿ ವಾರ್ತೆ ಧಾರವಾಡ:** ಪೊಲೀಸ್ ಇಲಾಖೆಯು ತ್ಯಾಗ, ಶಿಸ್ತು, ಸಮಯಪ್ರಜ್ಞೆಗೆ ಸಾಕ್ಷಿಯಾಗಿದೆ. ಪೊಲೀಸ್ ಸಿಬ್ಬಂದಿಗಳಲ್ಲಿನ ಶಿಸ್ತು, ಸಾಮಾಜಿಕ ಕಳಕಳಿ ಮತ್ತು ಸಮಯ ಪ್ರಜ್ಞೆಯು ನಮ್ಮ ಗೌರವ ಹೆಚ್ಚಿಸುತ್ತದೆ. ಇಲಾಖೆಗೆ ಸೇರುವಾಗ ಕೇಳಿದ ಪಾಠ, ಇಲಾಖೆಯ ನೀತಿ ನಿಯಮಗಳನ್ನು ನಿವೃತ್ತಿಯವರೆಗೂ ಸ್ಮರಿಸಿ ಅಳವಡಿಸಿಕೊಂಡು ಮುನ್ನಡೆದರೆ, ಸಾರ್ಥಕ ಸೇವೆ ನಮ್ಮದಾಗುತ್ತದೆ ಎಂದು ನಿವೃತ್ತ ಪೊಲೀಸ್ ಉಪನಿರೀಕ್ಷಕಿ ಡಿ. ಚಾಮುಂಡೇಶ್ವರಿ ಅವರು ಹೇಳಿದರು.



ಅವರು ಇಂದು ಬೆಳಿಗ್ಗೆ ನಗರದ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ಆಯೋಜಿಸಿದ ಪೊಲೀಸ್ ಧ್ವಜ ದಿನಾಚರಣೆ ಮತ್ತು ನಿವೃತ್ತರ ಸೇವಾ ಸ್ಮರಣೆ ಹಾಗೂ ಗೌರವ ಸಮರ್ಪಣೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಮಾತನಾಡಿದರು.

ಪೊಲೀಸ್ ಇಲಾಖೆ ಒಂದು ಕುಟುಂಬವಿದ್ದಂತೆ, ಕೆಳಹಂತದ ಅಧಿಕಾರಿ ಸಿಬ್ಬಂದಿಗಳು ಆಕಸ್ಮಿಕವಾಗಿ ಮಾಡುವ ತಪ್ಪುಗಳನ್ನು ಮನ್ನಿಸಿ, ಹಿರಿಯ ಅಧಿಕಾರಿಗಳು ಮಾರ್ಗದರ್ಶನ ನೀಡಬೇಕು. ಇಲಾಖೆಯಿಂದ ಸಿಗುವ ಪ್ರೋತ್ಸಾಹ, ಗೌರವ, ಪ್ರೀತಿ, ವಿಶ್ವಾಸಗಳು ಸಿಬ್ಬಂದಿಗಳಲ್ಲಿ ಆತ್ಮವಿಶ್ವಾಸ ತುಂಬಿ ಅವರ ವೃತ್ತಿಪರತೆಯನ್ನು ಹೆಚ್ಚಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಪೊಲೀಸ್ ಇಲಾಖೆಯಲ್ಲಿ ಸಾಕಷ್ಟು ಆಧುನಿಕತೆ ಬಂದಿದೆ. ಅಪರಾಧ ಪತ್ತೆ, ಇಲಾಖೆಯಲ್ಲಿ ಚೈತನ್ಯ, ವೃತ್ತಿ ಕೌಶಲ್ಯ ತುಂಬಲು ವಿಜ್ಞಾನ ತಂತ್ರಜ್ಞಾನ ಬಳಸಲಾಗುತ್ತಿದೆ. ಎಲ್ಲರೂ ಹೊಸತನ್ನು ಅಳವಡಿಸಿಕೊಂಡು ಸುಗಮವಾಗಿ ಮತ್ತು ಅಕ್ಕರೆಯಿಂದ ತಮ್ಮ ಕೆಲಸಕಾರ್ಯಗಳನ್ನು ನಿರ್ವಹಿಸುವ ವಾತಾವರಣ ಎಲ್ಲಾ ಪೊಲೀಸ್ ಕಚೇರಿ ಮತ್ತು ಠಾಣೆಗಳಲ್ಲಿ ಮೂಡಬೇಕೆಂದು ಅವರು ಹೇಳಿದರು.

ನಮ್ಮ ಪೊಲೀಸ್ ಇಲಾಖೆಯಲ್ಲಿ ನಾವೆಲ್ಲರೂ ಒಂದು ಕುಟುಂಬದಂತೆ ಬದುಕುತ್ತಿದ್ದೇವೆ. ಒಬ್ಬರಿಗೆ ನೋವಾದರೆ ಇನ್ನೊಬ್ಬರು ಅದಕ್ಕೆ ಸಹಾಯಕವಾಗಿ ಸ್ಪಂದಿಸುವ ಮನೋಭಾವ ನಮ್ಮೆಲ್ಲರದು. ಎಲ್ಲಾ ರೀತಿಯ ಅಡೆತಡೆಗಳು ಇಲಾಖೆಯಲ್ಲಿ ಬರುತ್ತದೆ. ಅವುಗಳಿಗೆ ತಗ್ಗದೇ ಬಗ್ಗದೇ, ಹೆದರದೇ ಕರ್ತವ್ಯವನ್ನು ನಿರ್ವಹಿಸಬೇಕಾಗುತ್ತದೆ ಎಂದು ಡಿ.ಚಾಮುಂಡೇಶ್ವರಿ ಅವರು ಹೇಳಿದರು.

ನಾವು ಶಿಸ್ತಿನಿಂದ ನಡೆದರೆ ಅಧಿಕಾರಿಗಳು ನಮ್ಮನ್ನು ಗೌರವಿಸುತ್ತಾರೆ. ಮತ್ತು ಸಾರ್ವಜನಿಕರು ಸಹ ನಮ್ಮನ್ನು ಗೌರವಿಸುತ್ತಾರೆ. ಹಾಗೂ ನಮ್ಮ ಕುಟುಂಬ ನಮ್ಮನ್ನು ಬೆಳೆಸುತ್ತವೆ. ಅದಕ್ಕಾಗಿ ಯಾರಿಗೂ ಹೆದರಿ ಕರ್ತವ್ಯವನ್ನು ನಿರ್ವಹಿಸಬೇಕಾಗಿಲ್ಲ. ನಮ್ಮನ್ನು ಪ್ರಮಾಣಿಕತೆ ಕಾಪಾಡುತ್ತದೆ. ನಾವು ತೆಗೆದುಕೊಳ್ಳುವ ಸಂಬಳಕ್ಕೆ ಸಮನಾಗಿ ದುಡಿಯುವದರಿಂದ, ನಮ್ಮ ಪರಿಶ್ರಮ ಇಲಾಖೆಗೆ ಸಾರ್ಥಕತೆಯನ್ನು ತರುತ್ತದೆ. ಎಲ್ಲಾ ರೀತಿಯ ಸೇವೆಯನ್ನು ಸಹ ಇಲಾಖೆಯಲ್ಲಿ ಮಾಡಿ ಹಲವಾರು ಅಧಿಕಾರಿ, ಸಿಬ್ಬಂದಿಗಳು ನಿವೃತ್ತಿಯಾಗಿದ್ದಾರೆ ಎಂದು ಡಿ.ಚಾಮುಂಡೇಶ್ವರಿ ಅವರು ತಿಳಿಸಿದರು.

ಇಲಾಖೆಗೆ ಬಂದ ಮೇಲೆ ಇಲಾಖೆಯನ್ನು ಬೈಯುವುದು, ಹೀಯಾಳಿಸುವುದು ಅದು ನೌಕರರಿಗೆ ಶೋಭೆಯಲ್ಲ, ಒಂದು ಸಲ ನಮ್ಮ ಪಾಲಿಗೆ ಬಂದಿದ್ದು ಪಂಚಾಮೃತವೆಂದು ನಾವು ನಮ್ಮ ಆತ್ಮಸಂತೋಷದಿಂದ ಸ್ವೀಕರಿಸದರೆ, ಅದು ನಮ್ಮ ಜೀವನದ ವೈಭವವಾಗುತ್ತದೆ. ಮತ್ತು ಇಲಾಖೆಗೆ ಕಳಸವಾಗುತ್ತದೆ. ಪೊಲೀಸ್ ಇಲಾಖೆಯಲ್ಲಿ ಹಲವಾರು ರೀತಿಯ ಆಧುನಿಕ ತಂತ್ರಜ್ಞಾನ, ಅಪರಾಧ ಪತ್ತೆ ಹಚ್ಚುವ ಹಲವಾರು ವಿಧಾನಗಳು ಈಗಾಗಲೇ ಆವಿಷ್ಕಾರ ಮಾಡಿ ಅಳವಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ಎಸ್.ಪಿ ಅವರು ಸೇರಿದಂತೆ ಎಲ್ಲ ಹಿರಿಯ ಅಧಿಕಾರಿಗಳನ್ನು ಇಲಾಖೆಯ ಇತರ ಅಧಿಕಾರಿ, ಸಿಬ್ಬಂದಿ ವರ್ಗದವರು ತಂಬಾ ಗೌರವದಿಂದ ಕಾಣುತ್ತಾರೆ. ಸಿಬ್ಬಂದಿ ಹಾಗೂ ಅಧಿಕಾರಿ ವರ್ಗದವರು ಸಮಯ ಸಂದರ್ಭಕ್ಕೆ ಅನುಗುಣವಾಗಿ ತಿಳಿಯದೇ ಆಕಸ್ಮಿಕವಾಗಿ ಮಾಡಿದಂತಹ ಕೆಲವು ಸಣ್ಣ ಪುಟ್ಟ ತಪ್ಪುಗಳನ್ನು ಉದಾರ ಮನಸ್ಸಿನಿಂದ ಮನ್ನಿಸುವುದೇ ದೊಡ್ಡ ಕೊಡುಗೆಯಾಗಿದೆ ಎಂದು ಅವರು ತಿಳಿಸಿದರು.

ಒಬ್ಬ ಕಟ್ಟ ಕಡೆಯ ಪೊಲೀಸ್ ಕಾನ್ಸಟೇಬಲನಿಂದ ಹಿಡಿದು ತಮ್ಮ ಆದೀನದಲ್ಲಿರುವ ಅಧಿಕಾರಿ ವರ್ಗದವರ ಸಮಸ್ಯೆಗಳನ್ನು ಆಲಿಸಿ ಇಲಾಖೆಯಲ್ಲಿ ಕಂಡು ಬರುವ ಸಣ್ಣ ಪುಟ್ಟ ಅವರ ತೊಂದರೆಗಳನ್ನು ಪರಿಹರಿಸಿ, ಅವರ ಎಲ್ಲಾ ಸಮಸ್ಯೆಗಳಿಗೆ ತಾವು ಸ್ಪಂದಿಸಬೇಕು ಎಂದು ಅವರು ಹಿರಿಯ ಅಧಿಕಾರಿಗಳಲ್ಲಿ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಸ್ವಾಗತಿಸಿ ಪೊಲೀಸ್ ಕಲ್ಯಾಣ ಚಟುವಟಿಕೆಗಳ ಕುರಿತು ವರದಿ ವಾಚನ ಮಾಡಿದರು. ಎಸ್‌ಆರ್‌ಎಸ್‌ಐಗಳಾದ ವೈಎಂ ದೊಡ್ಡಮನಿ ಹಾಗೂ ಪಿ.ಎಚ್. ಡಾವಣಗೇರಿ ಅವರು ಕಾರ್ಯಕ್ರಮ ನಿರೂಪಿಸಿದರು. ಡಿಎಆರ್ ಡಿಎಸ್‌ಪಿ ಡಿ.ಎಸ್.ಧನಗರ ಅವರು ವಂದಿಸಿದರು.

**ನಿವೃತ್ತರಿಗೆ ಗೌರವ ಸಮರ್ಪಣೆ:** ಪೊಲೀಸ್ ಇಲಾಖೆಯಲ್ಲಿ ದೀರ್ಘಾವದಿಗೆ ಸೇವೆ ಸಲ್ಲಿಸಿ ನಿವೃತ್ತರಾದ ಪೊಲೀಸ್ ಅಧಿಕಾರಿ ಸಿಬ್ಬಂದಿಗಳಾದ ಪಿಎಸ್‌ಐ ಎಂ.ಹೆಚ್.ಮುಂದಿನಮನಿ, ಪಿಎಸ್‌ಐ ಆರ್.ಬಿ.ಹಳ್ಳಿ, ಮಹಿಳಾ ಪಿಎಸ್‌ಐ ಕೆ.ವಿ ವಾಲಿಕಾರ ಹಾಗೂ ಎಎಸ್‌ಐಗಳಾದ ಎಸ್.ಐ.ಗದಗ, ಎಸ್.ಸಿ.ಗಂಡಲಾಟಿ, ಹೆಚ್.ಟಿ.ಬಂಡಿವಡ್ಡರ, ಐ.ಡಿ.ಭಾವಿಮನಿ, ಎಂ.ಆರ್.ಗೋಲಂದಾಜ್, ವೈ.ಎಸ್.ಮೇಟಿ, ಹೆಚ್.ಜೆ.ಜಾಧವ ಮತ್ತು ಸಿಹೆಚ್‌ಸಿಗಾಳದ ಡಿ.ವೈ.ಮುಮ್ಮಿಗಟ್ಟಿ, ಎನ್.ವಾಯ್.ಭರಮನ್ನವರ, ಯು.ಆರ್.ಮೆಟ್ಟಿನ, ಎ.ಎನ್.ಚಿಕಣಿ, ಎಂ.ಎಸ್.ಕೊಟಂಕಿ. ಅವರಿಗೆ ಸನ್ಮಾನಿಸಿ, ಗೌರವಿಸಲಾಯಿತು.

**ಗೌರವವಂದನೆ:** ಪೊಲೀಸ್ ಧ್ವಜ ದಿನಾಚರಣೆ ಅಂಗವಾಗಿ ಪರೇಡ್ ಕಮಾಂಡರ್ ಡಿಎಆರ್ ಆರ್.ಪಿ.ಐ.ಗಳಾದ ಎಫ್.ಆರ್.ಡೊಕ್ಕಣ್ಣನವರ ಮತ್ತು ಆರ್.ಎಸ್. ಗುಡನಟ್ಟಿ ಮುಂದಾಳತ್ವದಲ್ಲಿ ಆರ್ ಎಸ್‌ಐ ವಾಸು ರಕ್ಷೇದ ನೇತೃತ್ವದ 1ನೆ ತಂಡ, ಧಾರವಾಡ ಗ್ರಾಮೀಣ ಪೊಲೀಸ್ ಠಾಣೆ ಪಿ.ಎಸ್.ಐ. ಸುನೀಲಕುಮಾರ ಎಂ.ಎಲ್ ನೇತೃತ್ವದ 2ನೇ ತಂಡ ಹಾಗೂ ಎಸ್‌ಪಿ ಕಚೇರಿಯ ನಿಸ್ತಂತು ವಿಭಾಗದ ಜಿಲ್ಲಾ ನಿಯಂತ್ರಣದ ಕೊಠಡಿಯ ಮಹಿಳಾ ಪಿಎಸ್‌ಐ ನಿರ್ಮಲಾ ಜಂಬಗಿ, ಡಿಎಆರ್ ಆರ್‌ಎಸ್‌ಐ ಮಂಜುನಾಥ ಕುರುಗೋಡಿ ನೇತೃತ್ವದ 4ನೇ ತಂಡದ ಸದಸ್ಯರು ಆಕರ್ಷಕ ಪಥ ಸಂಚಲನದ ಮೂಲಕ ಗೌರವ ವಂದನೆ ಸಲ್ಲಿಸಿದರು.

ಎಆರ್‌ಎಸ್‌ಐ ವೈ.ಎಫ್. ಭಜಂತ್ರಿ ಹಾಗೂ ಎಪಿಸಿ. ಸಾಗರ ಬಸರಿಕೋಡಿ ಅವರ ನೇತೃತ್ವದ ಜಿಲ್ಲಾ ಪೊಲೀಸ್ ಬ್ಯಾಂಡ ತಂಡವು ಆಕರ್ಷಕವಾಗಿ ಮತ್ತು ಸುಶ್ರಾವ್ಯವಾಗಿ ರಾಷ್ಟ್ರಗೀತೆ ಹಾಗೂ ಸಂಗೀತ ನುಡಿಸಿತು.

ಕಾರ್ಯಕ್ರಮದಲ್ಲಿ ಕೆಎಸ್‌ಐಎಸ್‌ಎಫ್ ಕಮಾಂಡೆಂಟ್ ಗುರುನಾಥ, ಸಿಇಎನ್ ಪೊಲೀಸ್ ಠಾಣೆಯ ಡಿಎಸ್‌ಪಿ ಶಿವಾನಂದ ಕಟಗಿ, ಧಾರವಾಡ ಗ್ರಾಮೀಣ ವೃತ್ತದ ಡಿಎಸ್‌ಪಿ ವಿನೋದ ಮುಕ್ತೆದಾರ ಸೇರಿದಂತೆ ಪೊಲೀಸ್ ಇಲಾಖೆಯ ಜಿಲ್ಲಾ ಮಟ್ಟದ ಎಲ್ಲಾ ಪೊಲೀಸ್ ಅಧಿಕಾರಿಗಳು, ನಿವೃತ್ತ ಪೊಲೀಸ್ ಅಧಿಕಾರಿಗಳು, ಪೊಲೀಸ್ ಕುಟುಂಬದ ಸದಸ್ಯರು, ಸಾರ್ವಜನಿಕರು ಭಾಗವಹಿಸಿದ್ದರು.

# ನಾಟಕಗಳು ಮನಃ ಪರಿವರ್ತನೆಗೆ ಉತ್ತಮ ವೇದಿಕೆ



ಧಾರವಾಡ: ನಾಟಕಗಳು ಕೇವಲ ಮನರಂಜನೆಗೆ ಮಾತ್ರ ಸೀಮಿತವಾಗಿರದೇ ಮನಸ್ಸಿನಲ್ಲಿರುವ ಸಮಸ್ಯೆ, ಭಿನ್ನಾಭಿಪ್ರಾಯ, ತಪ್ಪುಗಳನ್ನು ತಿದ್ದಿಕೊಂಡು ಉತ್ತಮ ನಾಗರಿಕರಾಗಿ ಸಮಾಜದಲ್ಲಿ ಜೀವನ ನಡೆಸಲು ಉತ್ತಮ ವೇದಿಕೆಯಾಗಿದೆ ಎಂದು ರಂಗಾಯಣ ಆಡಳಿತಾಧಿಕಾರಿ ಶಶಿಕಲಾ ಹುಡೇದ ಅವರು ಹೇಳಿದರು.

ಇಂದು ಕೇಂದ್ರ ಕಾರಾಗೃಹದ ಗಾಂಧಿ ಭವನದಲ್ಲಿ ರಂಗಾಯಣ ಧಾರವಾಡ ಹಾಗೂ ಕೇಂದ್ರ ಕಾರಾಗೃಹದ ಸಹಯೋಗದಲ್ಲಿ ಆಯೋಜಿಸಿದ್ದ "ರಂಗಗೀತೆ ಹಾಗೂ ಮರಳಿ ಮಹಾತ್ಮನೆಡೆಗೆ" ನಾಟಕ ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದಲ್ಲಿ ಯಾವುದೋ ಒಂದು ತಪ್ಪನ್ನು ಮಾಡಿ ಶಿಕ್ಷೆ ಅನುಭವಿಸುತ್ತಿರುವ ಕಾರಾಗೃಹ ನಿವಾಸಿಗಳಿಗೆ ರಂಗಾಯಣವು ಈಗಾಗಲೇ ರಂಗ ಶಿಬಿರದ ಮೂಲಕ ಅವರ ಕಲೆಯನ್ನು ಗುರುತಿಸಿ, ಮುಂದಿನ ದಿನಗಳಲ್ಲಿ ಅವರು ಉತ್ತಮ ಜೀವನವನ್ನು ರೂಪಿಸಿಕೊಳ್ಳಲು ಪರಿಣಾಮವನ್ನು ಬೀರಿದೆ. ಗಾಂಧಿ ಎಂಬ ವ್ಯಕ್ತಿತ್ವವು ಶ್ರೇಷ್ಠವಾದುದು. ಭಾರತದಲ್ಲಿ ಮಾತ್ರವಲ್ಲದೇ ವಿದೇಶಗಳಲ್ಲಿಯೂ ಗಾಂಧಿಜಿಯವರ ಪ್ರಭಾವ ಬೀರಿದೆ. ಪ್ರಸ್ತುತ ದಿನದಲ್ಲಿ ಭೂಗೋಳವು ಯುದ್ಧವನ್ನು ಎದುರಿಸುತ್ತಿದೆ. ಇಂತಹ ಘಟನೆಗಳು ನಡೆಯಬಾರದೆಂದು ಗಾಂಧಿಜಿಯವರು ಗ್ರಾಮ ಸ್ವರಾಜ್ಯ, ಸರಳಜೀವನ ಶೈಲಿ, ಅಸ್ಪೃಶ್ಯತಾ ನಿವಾರಣೆ, ಅಹಿಂಸೆಯನ್ನು ಅನುಸರಿಸಿದ್ದರು. ಇಂದು ನಡೆಯುತ್ತಿರುವ ಪ್ರಚಲಿತ ವಿದ್ಯಮಾನಗಳಲ್ಲಿ ಗಾಂಧೀಜಿಯವರ ತತ್ವಗಳು ಸೂಕ್ತವಾಗಿವೆ. ಬೆಳಗಾವಿ ಕಾಂಗ್ರೆಸ್ ಅಧಿವೇಶನ ನೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಉತ್ತರ ಕರ್ನಾಟಕದಲ್ಲಿ ಗಾಂಧಿಜಿಯವರ ಪ್ರಭಾವ, ಚಳುವಳಿ, ಮಾರ್ಗದರ್ಶನಗಳ ಕುರಿತ ಈ ನಾಟಕವು ಮಹತ್ವವಾಗಿದೆ ಎಂದರು.

ಕೇಂದ್ರ ಕಾರಾಗೃಹದ ಸಹಾಯಕ ಅಧೀಕ್ಷಕರಾದ ನಿರ್ಮಲ ಬಿ.ಆರ್ ಅವರು ಮಾತನಾಡಿ, ಕಾರಾಗೃಹ ನಿವಾಸಿಗಳು ನಾಟಕವನ್ನು ಮನರಂಜನೆಗಾಗಿ ನೋಡದೇ ಅದರಲ್ಲಿರುವ ಸಂದೇಶಗಳನ್ನು ಅರಿತುಕೊಂಡು ನಮ್ಮಲ್ಲಿ ಅಳವಡಿಸಿಕೊಳ್ಳಬೇಕು. ಕಲೆ, ಪ್ರತಿಭೆ, ಶಿಕ್ಷಣವು ನಿಮಗೆ ಉತ್ತಮ ಜೀವನವನ್ನು ರೂಪಿಸಿಕೊಳ್ಳಲು ಸಹಕಾರಿಯಾಗಿದೆ ಎಂದರು

ಕೇಂದ್ರ ಕಾರಾಗೃಹದ ಅಧೀಕ್ಷಕರಾದ ರಘುಪತಿ ಸಿ.ಜೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಒಂದು ನಾಟಕ ಪ್ರದರ್ಶನಗೊಳ್ಳಬೇಕಾದರೆ ಕಲಾವಿದರ ಪರಿಶ್ರಮ ಮುಖ್ಯವಾಗಿರುತ್ತದೆ. ಅಂತಹ ಕಲೆಗೆ ಪ್ರೋತ್ಸಾಹ ನೀಡಬೇಕು. ಒಂದು ಕ್ಷಣದಲ್ಲಿ ಮಾಡುವ ತಪ್ಪಿನಿಂದಾಗಿ ಇಂದು ಶಿಕ್ಷೆ ಅನುಭವಿಸುತ್ತಿರುವ ಕೈದಿಗಳಲ್ಲಿಯೂ ಕಲೆ, ಪ್ರತಿಭೆ ಅಡಗಿರುತ್ತದೆ. ಇಂತಹ ಪ್ರತಿಭೆಗಳಿಗೆ ಕೇಂದ್ರ ಕಾರಾಗೃಹವು ಕಲೆ, ಕೌಶಲ್ಯಗಳನ್ನು ರೂಪಿಸುವಂತಹ ಹಲವಾರು ಯೋಜನೆಗಳ ಮೂಲಕ ಕೈದಿಗಳ ಮುಂದಿನ ಭವಿಷ್ಯಕ್ಕೆ ಉತ್ತಮ ವೇದಿಕೆ ಹಾಗೂ ಆರ್ಥಿಕ ಸಹಾಯವನ್ನು ಮಾಡುತ್ತದೆ. ಅವುಗಳ ಪ್ರಯೋಜನಗಳನ್ನು ಪಡೆಯಬೇಕು ಎಂದು ಸಲಹೆ ನೀಡಿದರು.

ಕಾರಾಗೃಹದ ಜೈಲರ್ ದೀಪಾ ರಾಮದುರ್ಗ ಅವರು ಉಪಸ್ಥಿತರಿದ್ದರು. ಶಿಕ್ಷಕರಾದ ಸಿ.ಪಿ ಕುಮಾರ ಕುರಬೆಟ್ ನಿರೂಪಿಸಿದರು.

# ಶ್ರೀ ಕೋಡಿಯಲ್ಲಮ್ಮ ದೇವಿ ಜಾತ್ರೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಪುರಾತನ ಪ್ರಸಿದ್ದ ಶ್ರೀ ಕೋಡಿಯಲ್ಲಮ್ಮ ದೇವಿಯ ಜಾತ್ರಾ ಮಹೋತ್ಸವ ಸಂಪ್ರದಾಯದಂತೆ ದವನದ ಹುಣ್ಣಿಮೆಯ ದಿನ ಅಪಾರ ಭಕ್ತ ಸಮೂಹದ ಪಾಲ್ಗೊಳ್ಳುವಿಕೆಯೊಂದಿಗೆ ಶೃದ್ಧಾ, ಭಕ್ತಿಯಿಂದ ನೆರವೇರಿತು.

ಬೆಳಿಗ್ಗೆಯಿಂದ ದೇವಸ್ಥಾನದಲ್ಲಿ ವಿಶೇಷ ಅಲಂಕಾರ, ಪೂಜೆ ನೆರವೇರಿತು. ಭಕ್ತರು ದೇವಸ್ಥಾನಕ್ಕೆ ಆಗಮಿಸಿ ದರ್ಶನಾಶೀವಾದ ಪಡೆದುಕೊಂಡರಯ. ಸಂಜೆ ಅದ್ದೂರಿ ರಥೋತ್ಸವ ಅಪಾರ ಭಕ್ತ ಸಮೂಹದೊಂದಿಗೆ ನೆರವೇರಿತು. ರಥೋತ್ಸವ ಸಂದರ್ಭದಲ್ಲಿ ಸೇರಿದ್ದ ಭಕ್ತ ಸಮೂಹ ದೇವಿಯ ನಾಮಸ್ಮರಣೆ, ಉದೋ ಉದೋ ಉದ್ಘಾರ ಘೋಷಣೆಗೈದರು. ರಥಕ್ಕೆ ಉತ್ತತ್ತಿ, ಬೆಲ್ಲದ ಚೂರು, ಬಾಳೆಹಣ್ಣು ಎಸೆದು ಭಕ್ತಿಯಿಂದ ಬೇಡಿದರು. ಇತ್ತೀಚಿಗೆ ವಿವಾಹ ಬಂಧನಕ್ಕೊಳಗಾದ ನವ ಜೋಡಿಗಳು ಹೆಚ್ಚಿನ ಸಂಖ್ಯೆಯಲ್ಲಿ ರಥ ನೋಡಲು ಆಗಮಿಸಿದ್ದು ಕಂಡು ಬಂದಿತಲ್ಲದೇ ಜಾತ್ರೆಯ ವಿಶೇಷ ಮಂಡಕ್ಕಿ, ಮಿರ್ಚಿ ಸವಿದ ದೃಶ್ಯ ಸಾಮಾನ್ಯವಾಗಿ ಕಂಡು ಬಂದಿತು. ಶುಕ್ರವಾರ ಸಂಜೆ 5 ಗಂಟೆಗೆ ಕಡುಬಿನ ಕಾಳಗ ಮತ್ತು ಏ04 ರಿಂದ ಮೂರು ದಿನ ಕುಸ್ತಿ ಪಂದ್ಯಾವಳಿ ನಡೆಯಲಿವೆ.

# ಪ್ರಶಿಕ್ಷಣ ಮಹಾ ಅಭಿಯಾನ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಜಗದ್ಗುರು ಶ್ರೀ ವೀರಗಂಗಾಧರ ಕಲ್ಯಾಣ ಮಂಟಪದಲ್ಲಿ ಶಿರಹಟ್ಟಿ ಮಂಡಲ ಬಿಜೆಪಿ ವತಿಯಿಂದ ಪಂಡಿತ್ ದೀನ ದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾ ಅಭಿಯಾನ ಜರುಗಿತು.

ಕಾರ್ಯಕ್ರಮವನ್ನು ಶಿರಹಟ್ಟಿ ಮಂಡಲ ಬಿಜೆಪಿ ಅಧ್ಯಕ್ಷ ಸುನಿಲ ಮಹಾಂತಶೆಟ್ಟರ ಶಾಸಕ ಚಂದ್ರು ಲಮಾಣಿ ಬಸವರಾಜ್ ಕುಂದಗೋಳ ಮಠ ಎಂಎಸ್ ದೊಡ್ ಗೌಡ್ರು ಮತ್ತಿತರರು ಸಸಿಗೆ ನೀರರೆಯುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ನಿಂಗಪ್ಪ ಬನ್ನಿ ಸೋಮಣ್ಣ ಉಪನಾಳ ವಿಜಯ ಹತ್ತಿ ಕಾಳ ಗಂಗಾಧರ ಮೆಣಸಿನಕಾಯಿ ಬಸವರಾಜ್ ಸೇರಿದಂತೆ ಅನೇಕರಿದ್ದರು.

# ದಿ. ಡಾ. ಜೆ.ವಿ. ಗೌಡ ಶಿಕ್ಷಣ & ಸಂಶೋಧನಾ ಪ್ರತಿಷ್ಠಾನದ ಸಂಸ್ಥಾಪನಾ ದಿನದ ಉಪನ್ಯಾಸ



ಕೃಷಿ ವಿಶ್ವವಿದ್ಯಾಲಯದ ಧಾರವಾಡದ ಮೊದಲ ಕುಲಪತಿಗಳಾದ ದಿ. ಡಾ. ಜೆ.ವಿ. ಗೌಡರ ಜನ್ಮದಿನಾಚರಣೆ ಸ್ಮರಣಾರ್ಥ ಏಪ್ರೀಲ್ 02, 2026 ರಂದು ಬೆಳಿಗ್ಗೆ 11.00 ಗಂಟೆಗೆ, ಸಮುದಾಯ ವಿಜ್ಞಾನ, ಮಹಾವಿದ್ಯಾಲಯದ ಸಭಾಂಗಣದಲ್ಲಿ ಡಾ. ಜೆ.ವಿ. ಗೌಡ ಶಿಕ್ಷಣ ಮತ್ತು ಸಂಶೋಧನಾ ಪ್ರತಿಷ್ಠಾನದ ಸಂಸ್ಥಾಪನಾ ದಿನದ ಉಪನ್ಯಾಸವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವು ದೀಪ ಬೆಳಗಿಸಿ, ಡಾ. ಜೆ.ವಿ. ಗೌಡ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮುಖಾಂತರ ಪ್ರಾರಂಭವಾಯಿತು. ಡಾ. ಜೆ.ವಿ. ಗೌಡರು ಭಾರತದ ಪ್ರಸಿದ್ದ ಸೈಟೋಜೆನೆಟಿಸಿಸ್ಟ್‌ರಾಗಿದ್ದರು, ಸಾವಿರಾರು ವಿದ್ಯಾರ್ಥಿಗಳನ್ನು ಕೃಷಿ ಕ್ಷೇತ್ರದಲ್ಲಿ ಪ್ರೇರೇಪಿಸಿದ ಅತ್ಯುತ್ತಮ ಪ್ರಾಧ್ಯಾಪಕರು ಹಾಗೂ ಮಹಾನ್ ದೃಷ್ಟಿಕೋನವನ್ನು ಹೊಂದಿದ್ದ ವ್ಯಕ್ತಿಯಾಗಿದ್ದರು. ಮುಖ್ಯ ಅತಿಥಿಗಳಾಗಿ ಹಾಗೂ ಉಪನ್ಯಾಸಕರಾಗಿ ಆಗಮಿಸಿದ ಸನ್ಮಾನ ಸ್ವೀಕರಿಸಿ ಮಾತನಾಡಿದ ಭಾರತೀಯ ಶೇಂಗಾ ಸಂಶೋಧನಾ ಸಂಸ್ಥೆ, ಜುನಾಗಡನ್ (ICAR-IIGR), ನಿರ್ದೇಶಕರಾದ ಡಾ. ಎಸ್. ಕೆ. ಬೇರಾರವರು "ಭಾರತದಲ್ಲಿ ಹೈ ಓಲಿಕ್ ಶೇಂಗಾ: ಲ್ಯಾಬ್ ಟು ಲ್ಯಾಂಡ್ ಯಶಸ್ವಿ ಪಯಣ ಮತ್ತು ಅದಕ್ಕೂ ಮೀರಿದ ಬೆಳವಣಿಗೆ" ಎಂಬ ವಿಷಯದ ಮೇಲೆ ಉಪನ್ಯಾಸವನ್ನು ನೀಡಿದರು.

ಅವರು ಭಾರತದಲ್ಲಿನ ಶೇಂಗಾ ಬೆಳೆಯ ವಿಸ್ತೀರ್ಣ, ಉತ್ಪಾದನೆ, ಉತ್ಪಾದಕತೆ ಮತ್ತು ತಲಾ ವ್ಯಕ್ತಿಗೆ ಲಭ್ಯವಿರುವ ಎಣ್ಣೆ ಬಳಕೆಯ ಬಗ್ಗೆ ಸಮಗ್ರ ಚಿತ್ರಣವನ್ನು ನೀಡಿದರು. ಶೇಂಗಾದಲ್ಲಿ ಸುಮಾರು 50% ಎಣ್ಣೆ ಅಂಶವಿರುವುದರಿಂದ, ಇದರ ಬೆಳೆಯ ವಿಸ್ತೀರ್ಣವನ್ನು ಹೆಚ್ಚಿಸುವ ಮೂಲಕ ದೇಶದ ಖಾದ್ಯ ತೈಲದ ಅವಶ್ಯಕತೆಯನ್ನು ಬಹುಮಟ್ಟಿಗೆ ಪೂರೈಸಬಹುದು ಮತ್ತು ಆಮದು ಅವಲಂಬನೆಯನ್ನು ಕಡಿಮೆ ಮಾಡಬಹುದು ಎಂದು ತಿಳಿಸಿದರು. ಅವರು ಐಸಿಎಆರ್–IIGR ಸಂಸ್ಥೆಯಿಂದ ಅಭಿವೃದ್ಧಿಪಡಿಸಲಾದ ಹೈ ಓಲಿಕ್ ಆಮ್ಲ ಹಾಗೂ ಹೆಚ್ಚಿನ ಉತ್ಪಾದನಾ ಸಾಮರ್ಥ್ಯ ಹೊಂದಿರುವ 'ಗಿರ್ನಾರ್–4' ಮತ್ತು 'ಗಿರ್ನಾರ್–5' ಶೇಂಗಾ ತಳಿಗಳನ್ನು ಪರಿಚಯಿಸಿದರು. ಈ ತಳಿಗಳನ್ನು ಮಾನ್ಯ ಪ್ರಧಾನಮಂತ್ರಿಗಳು 17 ಬಯೋ–ಫೋರ್ಟಿಫೈಡ್ ಬೆಳೆಗಳೊಂದಿಗೆ ಬಿಡುಗಡೆ ಮಾಡಿದ್ದಾರೆ ಎಂದು ತಿಳಿಸಿದರು. ಕರ್ನಾಟಕದಲ್ಲಿ ಶೇಂಗಾ ಬೆಳೆ ವಿಸ್ತೀರ್ಣ ಕುಗ್ಗುತ್ತಿರುವ ಹಿನ್ನೆಲೆಯಲ್ಲಿ, ಈ ಬೆಳೆಯು ಸಾಂಪ್ರದಾಯಿಕ ಪ್ರದೇಶಗಳಲ್ಲಿ ವಿಸ್ತೀರ್ಣ ಮತ್ತು ಉತ್ಪಾದನೆಯನ್ನು ಹೆಚ್ಚಿಸಲು ಕರೆ ನೀಡಿದರು. ದಿ. ಡಾ. ಜೆ.ವಿ.ಗೌಡ ಅವರ ಧರ್ಮಪತ್ನಿ ಶ್ರೀಮತಿ ಸುಶೀಲಾ ಜೆ. ಗೌಡರವರು ಭಾಗವಹಿಸಿದ್ದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕೃ.ವಿ.ವಿ., ಧಾರವಾಡದ ಕುಲಪತಿಗಳಾದ ಡಾ. ಪಿ.ಎಲ್. ಪಾಟೀಲರವರು ಬೆಳೆ ಅಭಿವೃದ್ಧಿಯ ಸಂಶೋಧನೆಯಲ್ಲಿ ನವೀನ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರಿಂದ ಉತ್ಪಾದಕತೆಯನ್ನು ಹೆಚ್ಚಿಸಬಹುದೆಂದು ಕರೆ ನೀಡಿದರು. ಡಾ. ಜೆ.ವಿ.ಗೌಡರವರ ಶೈಕ್ಷಣಿಕ ಮತ್ತು ಸಂಶೋಧನಾ ದೃಷ್ಟಿಕೋನಗಳನ್ನು ಮುಂದುವರೆಸುವುದಾಗಿ ಭರವಸೆ ನೀಡಿದರು. ಕೃಷಿ ವಿಶ್ವವಿದ್ಯಾಲಯ, ಧಾರವಾಡದ ವ್ಯವಸ್ಥಾಪನಾ ಮಂಡಳಿ ಸದಸ್ಯರುಗಳಾದ ಶ್ರೀಮತಿ ಪಾರ್ವತಿ ಎಸ್.ಕುರ್ಲೆ, ಶ್ರೀ ವೀರನಗೌಡ ಪಿ. ಪೋಲಿಸಗೌಡರ್, ಶ್ರೀ ರವಿಕುಮಾರ ಮಾಳಿಗೇರ, ಶ್ರೀ ಬಸವರಾಜ ಕುಂದಗೋಳಮಠ ಹಾಗೂ ಶ್ರೀ ಮಾಲತೇಶ ಶ್ಯಾಗೋಟಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿಶ್ರಾಂತ ಉಪಕುಲಪತಿಗಳು, ವಿಶ್ವವಿದ್ಯಾಲಯದ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಡಾ. ಜೆ.ವಿ. ಗೌಡ ಶಿಕ್ಷಣ ಮತ್ತು ಸಂಶೋಧನಾ ಪ್ರತಿಷ್ಠಾನದ ಸದಸ್ಯರು ಭಾಗವಹಿಸಿದ್ದರು. ಕಾರ್ಯಕ್ರಮಕ್ಕೆ ಆಗಮಿಸಿದ ಗಣ್ಯರನ್ನು ಹಾಗೂ ಸದಸ್ಯರನ್ನು ಕೃಷಿ ಮಹಾವಿದ್ಯಾಲಯ, ಧಾರವಾಡದ ವಿದ್ಯಾಧಿಕಾರಿ ಮತ್ತು ಪ್ರತಿಷ್ಠಾನದ ಉಪಾಧ್ಯಕ್ಷರಾದ ಡಾ. ಅಶೋಕ ಸಜ್ಜನ, ಸ್ವಾಗತಿಸಿದರು. ಡಾ. ಎಸ್. ಎ. ದೇಸಾಯಿ, ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು (ಜಿಪಿಬಿ) ಮತ್ತು ಪ್ರತಿಷ್ಠಾನದ ಕಾರ್ಯದರ್ಶಿಗಳ ವಂದನಾರ್ಪಣೆಗಳೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

# ಡಾ.ಶಿವಕುಮಾರ ಸ್ವಾಮೀಜಿ ಸಮಾಜದ ಏಳ್ಗೆಗೆ ಶ್ರಮಿಸಿದ ಕಾಯಕಯೋಗಿ

**ಬೆಳಗಾವಿ ವಾರ್ತೆ ವಿಜಯಪುರ:** ಡಾ.ಶಿವಕುಮಾರ ಸ್ವಾಮೀಜಿ ಅವರು ಅನ್ನ, ಅಕ್ಷರ, ಜ್ಞಾನ ಎಂಬ ತ್ರಿವಿಧ ದಾಸೋಹದ ಮೂಲಕ ಲಕ್ಷಾಂತರ ಬಡ ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿ,ಸಮಾಜಕ್ಕೆ ಶೈಕ್ಷಣಿಕ ಮತ್ತು ಆಧ್ಯಾತ್ಮಿಕ ಮಾರ್ಗದರ್ಶನ ನೀಡಿದ ಕಾಯಕಯೋಗಿ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ತಾಲೂಕಿನ ನಾಗಠಾಣ ಗ್ರಾಮದಲ್ಲಿ ಬುಧವಾರ ಹಮ್ಮಿಕೊಂಡ ಡಾ.ಶಿವಕುಮಾರ ಸ್ವಾಮಿಗಳ 119 ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪೂಜ್ಯರ ಜೀವನ ಸಂದೇಶಗಳನ್ನು ನಾವು ಅನುಸರಿಸಿ ಸದ್ಗತಿಯಿಂದ ಸತ್ಯಜೀವನ ನಡೆಸಬೇಕು. ಬೆಳೆದ ಕೈಗಳಿಂದ ಹಸಿದ ಹೊಟ್ಟೆಗೆ ಉಣಬಡಿಸುವ ಸೇತುವೆಯಾಗಿ ಅವರು ಸದಾ ದಾಸೋಹ ಪ್ರಜ್ಞೆಯ ಪ್ರತೀಕವಾಗಿದ್ದರು. ಅವರು

ಬಸವಾದಿ ಶರಣರ ತತ್ವವನ್ನು ಪಾಲಿಸುತ್ತಾ, ನಡೆ-ನುಡಿಯಲ್ಲಿ ಸಮಚಿತ್ತದಿಂದ ಆದರ್ಶ ಬದುಕನ್ನು ಬಾಳಿ, ಸಮಾಜದ ಆಧ್ಯಾತ್ಮಿಕ ಉನ್ನತಿಗೆ ಶ್ರಮಿಸಿದ್ದಾರೆ ಎಂದು ಹೇಳಿದರು.

ಶಿಕ್ಷಕ ಸಚಿನ ಅವಟಿ ಮಾತನಾಡಿ, ಬಡವರು, ದೀನರು, ಶೋಷಿತರಿಗೆ ತ್ರಿವಿಧ ದಾಸೋಹ ನೀಡುವ ಮೂಲಕ ಲಕ್ಷಾಂತರ ಕುಟುಂಬಗಳಲ್ಲಿ ಆರದ



ಮಹಾಜ್ಯೋತಿಯಾದ ಡಾ.ಶಿವಕುಮಾರ ಸ್ವಾಮೀಜಿ ಅವರು ತಿಳಿಸಿದ ಬದುಕಿನ ನೀತಿ, ಸಂದೇಶವನ್ನು ಎಲ್ಲರೂ ಪಾಲಿಸುವ ಮೂಲಕ ಅತ್ಯುತ್ತಮ ಜೀವನ ಕಟ್ಟಿಕೊಳ್ಳಲು ಸಲಹೆ ನೀಡಿದರು.

ಗ್ರಾಮದ ಭೀರದೇವರ ಪಟ್ಟದ ಗುರುಗಳಾದ ಗೂಳಪ್ಪ ಪೂಜಾರಿ ಸಾನ್ನಿಧ್ಯ ವಹಿಸಿದ್ದರು. ಪಿಕೆಪಿಎಸ್ ಉಪಾಧ್ಯಕ್ಷ ಪ್ರಭಾಕರ ಅರಕೇರಿ, ಹನಮಂತ ಬಕಾಟಿ, ರಾಮಚಂದ್ರ ಚೌಧರಿ, ಪಿಗ್ಮಿ ಏಜೆಂಟ್ ಮಂಜುನಾಥ ಹಳ್ಳಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಘಟಪ್ರಭಾ ಪುರಸಭೆಯ 2026-27 ನೇ ಸಾಲಿನ ಆಯವ್ಯಯ ಮಂಡನೆ



**ಬೆಳಗಾವಿ ವಾರ್ತೆ ಘಟಪ್ರಭಾ:** ಘಟಪ್ರಭಾ ಪುರಸಭೆಯ 2025-26 ನೇ ಸಾಲಿನ ಪರಿಷ್ಕೃತ ಮತ್ತು 2026-27 ನೇ ಸಾಲಿನ ಆಯವ್ಯಯವನ್ನು ಮಂಗಳವಾರರಂದು ಮುಖ್ಯಾಧಿಕಾರಿ ಶ್ರೀಮತಿ ಎಂ.ಎಸ್.ಪಾಟೀಲ ಮಂಡಿಸಿದರು.

ಬೈಲಹೊಂಗಲ ಉಪವಿಭಾಗಧಿಕಾರಿ ಶ್ರೀ ಪ್ರವೀನ ಜೈನ ರವರು ಅನುಮೊಧಿಸಿದರು. 2026-27 ನೇ ಸಾಲಿನ ಆಯವ್ಯಯ ಒಟ್ಟು ಆದಾಯವು 12.58ಕೋಟಿಯಷ್ಟಿದೆ. 5.55 ಕೋಟಿ ರಾಜಸ್ವ, ಬಂಡವಾಳ 3.02 ಕೋಟಿ ಮತ್ತು ವಿಶೇಷ ವಸೂಲಾತಿ ಆದಾಯ 4.01 ಒಳಗೊಂಡಿದೆ. ಒಟ್ಟು ವೆಚ್ಚ 12.54 ಕೋಟಿಯಷ್ಟಿದ್ದು. ರಾಜಸ್ವ 5.52 ಕೋಟಿ ಬಂಡವಾಳದಲ್ಲಿ 3.01 ಕೋಟಿ, ವಿಶೇಷ ವಸೂಲಾತಿ ವೆಚ್ಚ 4.01 ಕೋಟಿ ಮೊತ್ತ ಒಳಗೊಂಡಿದೆ. ಪುರಸಭೆ ಸಿಬ್ಬಂದಿ ವೇತನ, ರಸ್ತೆ, ಸ್ವಚಗಥತೆ ಘನತ್ಯಾಜ್ಯ ವಸ್ತು ವಿಲೇವಾರಿ ದುರಸ್ತಿ ಕಾಮಗಾರಿ ಮತ್ತು ಇತರೆ ಅಭಿವೃದ್ಧಿ ಕಾಮಗಾರಿಗಳಿಗೆ ಮೀಸಲಿರಿಸಲಾಗಿದೆ. ಮತ್ತು 3.84 ಲಕ್ಷಗಳ ಉಳಿತಾಯ ಬಜೆಟ ಮಂಡಿಸಲಾಗಿದೆಂದು ಘಟಪ್ರಭಾ ಪುರಸಭೆ ಮುಖ್ಯಾಧಿಕಾರಿ ಶ್ರೀಮತಿ ಎಂ.ಎಸ್.ಪಾಟೀಲ ತಿಳಿಸಿದ್ದಾರೆ.



**ಬೆಳಗಾವಿ ವಾರ್ತೆ ಗೋಕಾಕ:** ಇಲ್ಲಿಯ ಶ್ರೀನಗರ ಶ್ರೀ ಹನುಮಾನ ದೇವಸ್ಥಾನದ ಕಳಸಾರೋಹಣವು ಗುರುವಾರದಂದು ಅತಿವಿಜೃಂಭಣೆಯಿಂದ ಜರುಗಿತು.

ಈ ಸಂದರ್ಭದಲ್ಲಿ ಅರಭಾಂವಿಯ ಶ್ರೀ ಗುರುಬಸವಲಿಂಗ ಮಹಾಸ್ವಾಮಿಗಳು, ನಗರದ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು, ಘಟಪ್ರಭಾದ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಮರಡಿಮಠದ ಡಾ.ಪವಾಡಯ್ಯ ಮಹಾ ಸ್ವಾಮಿಗಳು, ಶಾಸಕರಾದ ರಮೇಶ ಜಾರಕಿಹೊಳಿ ಹಾಗೂ ಕಮೀಟಿಯವರು ಇದ್ದರು.

# ಗುಬ್ಬಲಗುಡ್ಡ ಮಠದ ಶ್ರೀಗಳಿಂದ ಸಾಮಾಜಿಕ ಕ್ರಾಂತಿ: ಶಾಸಕ ಬಾಲಚಂದ್ರ ಜಾರಕಿಹೊಳಿ

## ಗುಬ್ಬಲಗುಡ್ಡ ಕೆಂಪಯ್ಯ ಸ್ವಾಮಿ ಮಠದ ಜಾತ್ರಾ ಮಹೋತ್ಸವದ ಸಮಾರೋಪ ಸಮಾರಂಭ

**ಬೆಳಗಾವಿ ವಾರ್ತೆ ಘಟಪ್ರಭಾ:** ಈ ಭಾಗದಲ್ಲಿ ಗುಬ್ಬಲಗುಡ್ಡ ಮಠದ ಮಹಾಸ್ವಾಮಿಗಳು ಉತ್ತಮವಾದ ಕೆಲಸಗಳನ್ನು ಮಾಡುತ್ತಿದ್ದಾ ರೆ. ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ಆರೋಗ್ಯ ಮುಂತಾದ ಕ್ಷೇತ್ರಗಳಲ್ಲಿ ಅವಿರತ ವಾಗಿ ಶ್ರಮಿಸುತ್ತಿದ್ದಾರೆ. ಒಳ್ಳೆಯ ಕೆಲಸ-ಕಾರ್ಯಗಳನ್ನು ಮಾಡುವವರನ್ನು ಪ್ರೋತ್ಸಾಹ ಮಾಡುವಂತೆ ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ತಿಳಿಸಿದರು.

ಇಲ್ಲಿನ ಗುಬ್ಬಲಗುಡ್ಡ ಕೆಂಪಯ್ಯ ಸ್ವಾಮಿ ಮಠದ ಜಾತ್ರಾ ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಒಳ್ಳೆಯವರನ್ನು ಬೆಂಬಲಿಸಿ. ಆದರೆ, ಒಳ್ಳೆಯ ಕೆಲಸಗಳನ್ನು ಮಾಡಲು ಹೊರಟಿರುವ ಶ್ರೀಗಳ ಕಾಲುಗಳನ್ನು ಜಗ್ಗುವ ಕೆಲಸಗಳನ್ನು ಮಾತ್ರ ಮಾಡಬೇಡಿ ಎಂದು ವಾರ್ನ್ ಮಾಡಿದರು.

ನಮ್ಮ ದೇಶದಲ್ಲಿ ಅನೇಕ ಜಾತಿ, ಧರ್ಮಗಳಿವೆ. ಮಠ, ಮಾನ್ಯಗಳಿವೆ. ಸಾಧು, ಸಂತರು, ಮಹಾ ಪುರುಷರು ಇರುವುದರಿಂದಲೇ ನಾವೆಲ್ಲರೂ ಪಾವನರಾಗಿದ್ದೇವೆ. ದೇವಸ್ಥಾನಕ್ಕೆ ಹೋಗಿ ದೇವರಿಗೆ ಶಿರ ಬಾಗಿ ನಮಸ್ಕರಿಸುತ್ತೇವೆ. ನಾವು ಕೊಡುವ ತಂದೆ, ತಾಯಿಗಳಿಗೆ ಗೌರವ ಬೇರೆ ದೇಶಗಳಲ್ಲಿ ಸಿಗಲ್ಲ. ಭಾರತೀಯ ಸಂಸ್ಕೃತಿ, ಪರಂಪರೆಯು ಇಡೀ ಪ್ರಪಂಚಕ್ಕೆ ಮಾದರಿಯಾಗಿದೆ. ಆಚಾರ, ವಿಚಾರಗಳಲ್ಲಿ ನಮ್ಮ ದೇಶವನ್ನು ಮೀರಿಸುವವರು ಯಾರೂ ಇಲ್ಲವೆಂದು ಹೇಳಿದರು.

ರಸಾಯನಿಕದಿಂದ ನಮ್ಮ ದೇಹಕ್ಕೆ ನಾವೇ ಕಂಟಕಗಳನ್ನು ಆಹ್ವಾನಿಸುತ್ತಿದ್ದೇವೆ. ದಿನನಿತ್ಯದ ಜೀವನದಲ್ಲಿ ಆಹಾರ ಶೈಲಿಯು ಬದಲಾಗಬೇಕಿದೆ. ಪ್ರತಿಯೊಂದರಲ್ಲೂ ರಸಾಯನಿಕ ವಸ್ತುಗಳು ಬೆರೆಯುತ್ತಿರುವುದರಿಂದ ಸಂಚಕಾರ ಬರುತ್ತಲಿದೆ. ನಮ್ಮ ದುಡಿಮೆಯ ಅರ್ಧದಷ್ಟು ಹಣವನ್ನು ಆಸ್ಪತ್ರೆಗಳಿಗೆ ನೀಡುತ್ತಿದ್ದೇವೆ. ಹಳೆಯ ತಲೆಮಾರಿನ ವ್ಯಕ್ತಿಗಳಿಗೆ 60 – 70 ವರ್ಷಗಳಾದರೂ ಬಿಪಿ, ಸಕ್ಕರೆ ಕಾಯಿಲೆ ಬರುತ್ತಿರಲಿಲ್ಲ.

ಆದರೆ, ಈಗಿನ ತಲೆಮಾರಿನ ಯುವಕರಿಗೂ ಸಹ ಬಿಪಿ, ಸಕ್ಕರೆ ಕಾಯಿಲೆ ಬರುತ್ತಿದೆ. ಪ್ರತಿಯೊಂದರಲ್ಲೂ ರಸಾಯನಿಕ ಗೊಬ್ಬರ ಮಿಶ್ರಣವಾಗುವುದರಿಂದ ಅನೇಕ ರೋಗಗಳು ಬರುತ್ತಿವೆ. ರೈತರ ಬೆಳೆಗಳಲ್ಲಿ ಸಹ ರಸಾಯನಿಕ ಗೊಬ್ಬರ ಕಂಡು ಬರುತ್ತಿದೆ. ಆಧುನಿಕ ಶೈಲಿ ಎಂದುಕೊಂಡು ಒಕ್ಕಲುತನವನ್ನು ನಾವು ಮರೆತಿದ್ದೇವೆ. ಬೆಳೆ ಎಂದರೆ ರೈತರು ಕೇವಲ ಕಬ್ಬು ಅಂದುಕೊಂಡಿದ್ದಾರೆ. ಆದರೆ, ಕಬ್ಬಿನೊಂದಿಗೆ ಇನ್ನಿತರ ಕೃಷಿ ಬೆಳೆಗಳನ್ನು ಬೆಳೆಸಬೇಕು. ಹೈನುಗಾರಿಕೆಗೆ ಹೆಚ್ಚಿನ ಒತ್ತು ನೀಡುವುದರಿಂದ ರೈತರ ಆರ್ಥಿಕಾಭಿವೃದ್ಧಿ ಹೆಚ್ಚಳವಾಗುತ್ತದೆ. ರೈತರು ಬೆಳೆದ ಬೆಳೆಗಳಿಗೆ ಹೆಚ್ಚಿನ ಬೆಂಬಲ ಬೆಲೆ ನೀಡಿದರೆ ಅವರ ಜೀವನ ಮತ್ತಷ್ಟು ಸುಧಾರಿಸುತ್ತದೆ. ಅದಕ್ಕಾಗಿ ಕೇಂದ್ರ



ಹಾಗೂ ರಾಜ್ಯ ಸರ್ಕಾರಗಳು ರೈತರ ಬಗ್ಗೆ ಹೆಚ್ಚಿನ ಕಾಳಜಿಯನ್ನು ವಹಿಸುವಂತೆ ಕೋರುತ್ತೇನೆಂದು ಅವರು ತಿಳಿಸಿದರು.

ಗುಬ್ಬಲಗುಡ್ಡ ಮಠವು ಧಾರ್ಮಿಕ ವಾತಾವರಣವನ್ನು ನಿರ್ಮಿಸುತ್ತಿದೆ. ಶ್ರೀ ಮಠದ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು ಮಠದ ಅಭಿವೃದ್ಧಿಗಾಗಿ ಅನೇಕ ಹೊಸ ಹೊಸ ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ನಾನು ಕೂಡ ಶ್ರೀಮಠದ ಪ್ರಗತಿಗೆ ಶಕ್ತಿ ಮೀರಿ ತನು,ಮನ, ಧನಸಹಾಯ ಮಾಡುತ್ತೇನೆಂದು ಸದ್ಭಕ್ತರಿಗೆ ವಾಗ್ದಾನ ಮಾಡಿದರು. ಶ್ರೀಮಠದಿಂದ ಶಾಸಕ ಬಾಲಚಂದ್ರ ಜಾರಕಿಹೊಳಿಯವರನ್ನು ಪೂಜ್ಯರು ಪುಷ್ಪಾರ್ಪಣೆ ಮಾಡಿ ಗೌರವಿಸಿದರು.

ವೇದಿಕೆಯಲ್ಲಿ ಗುಬ್ಬಲಗುಡ್ಡ ಮಠದ ಪೀಠಾಧಿಪತಿ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು, ತಿಪಟೂರಿನ ಡಾ. ರುದ್ರಮುನಿ ಮಹಾಸ್ವಾಮಿಗಳು, ಮುರುಘರಾಜೇಂದ್ರ ಮಹಾಸ್ವಾಮಿಗಳು, ಹತ್ತರಗಿಯ ಗುರುಸಿದ್ಧ ಮಹಾಸ್ವಾಮಿಗಳು, ಅಂಕಲಗಿ- ಕುಂದರಗಿ ಮಠದ ಡಾ. ಅಮರ ಸಿದ್ಧೇಶ್ವರ ಮಹಾಸ್ವಾಮಿಗಳು, ಬಸವನ ಬಾಗೇವಾಡಿಯ ಸಿದ್ಧಲಿಂಗ ಮಹಾಸ್ವಾಮಿಗಳು, ನರಗುಂದದ ಶಿವಕುಮಾರ ಸ್ವಾಮಿಗಳು, ಅರಳಿಕಟ್ಟಿಯ ಶಿವಮೂರ್ತಿ ಸ್ವಾಮಿಗಳು, ಕಲ್ಬುರ್ಗಿಯ ಚರಲಿಂಗ ಮಹಾಸ್ವಾಮಿಗಳು, ಹೊಳಲಿನ ಚನ್ನಬಸವ ದೇವರು, ಶಿರಾಳಕೊಪ್ಪದ ವೀರಬಸವ ದೇವರು, ಚಿಂಚಣಿಯ ಶಿವಪ್ರಸಾದ ದೇವರು, ಮೆಳಕುಂದದ ಶಶಿಕುಮಾರ ದೇವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಂತರ ರಾತ್ರಿ ಜೀ ವಾಹಿನಿ ಸರಿಗಮಪ ಖ್ಯಾತಿಯ ಜ್ಞಾನೇಶ್ವರ ಮಡಿವಾಳರ ಸಂಗೀತ ಕಾರ್ಯಕ್ರಮವು ಜನಮನ ಸೂರೆಗೊಂಡಿತು.

# ವಿವಿಧ ಕಾರ್ಯಕ್ರಮಗಳ ಪೂರ್ವಭಾವಿ ಸಭೆ



**ಬೆಳಗಾವಿ ವಾರ್ತೆ ಬೆಳಗಾವಿ :** ಏಪ್ರಿಲ್ 7 ರಿಂದ ಭಾರತೀಯ ಜನತಾ ಪಾರ್ಟಿಯ ಸಂಸ್ಥಾಪನಾ ದಿನದ ಅಂಗವಾಗಿ ನಡೆಯಲಿರುವ ವಿವಿಧ ಕಾರ್ಯಕ್ರಮಗಳ ಬಗ್ಗೆ ಹಾಗು ಏಪ್ರಿಲ್ 14 ರಂದು ಶ್ರೀ ಬಾಬಾಸಾಹೇಬ್ ಅಂಬೇಡ್ಕರರ ಜನ್ಮ ಜಯಂತಿಯ ಕಾರ್ಯಕ್ರಮಗಳನ್ನು ಆಯೋಜಿಸುವ ಸಲುವಾಗಿ ಈ ಅಭಿಯಾನದ ಸಂಚಾಲಕನಾಗಿ ಪಕ್ಷದ ಪ್ರಮುಖರ ಜೊತೆ ಪೂರ್ವಭಾವಿ ಸಭೆ ನಡೆಸಲಾಯಿತು.

ನಮ್ಮೆಲ್ಲ ಕಾರ್ಯಕರ್ತರು, ಸಕ್ರಿಯ ಸದಸ್ಯರು ಸೇರಿದಂತೆ ಜಿಲ್ಲಾ ಮಟ್ಟದ ನಾಯಕರು ಹಾಗೂ ಚುನಾಯಿತ ಜನಪ್ರತಿನಿಧಿಗಳನ್ನು ಈ ಕಾರ್ಯಕ್ರಮದಲ್ಲಿ ಜೋಡಿಸಿ ಸೇವಾ ಕಾರ್ಯಗಳಲ್ಲಿ ಭಾಗವಹಿಸುವಂತೆ ಯೋಜನೆ ರೂಪಿಸಲಾಯಿತು.

ಈ ಸಭೆಯಲ್ಲಿ ಭಾಜಪಾ ಬೆಳಗಾವಿ ಮಹಾನಗರದ ಜಿಲ್ಲಾಧ್ಯಕ್ಷರಾದ ಶ್ರೀಮತಿ ಗೀತಾ ಸುತಾರ, ಪ್ರಧಾನ ಕಾರ್ಯದರ್ಶಿ ಶ್ರೀ ಈರಯ್ಯ ಖೋತ, ರಾಜಶೇಖರ ದೋಣಿ, ಭಾಜಪಾ ಬೆಳಗಾವಿ ಉತ್ತರ ಮಂಡಲದ ಅಧ್ಯಕ್ಷರಾದ ಶ್ರೀ ವಿಜಯ ಕೊಡಗನೂರ, ಪ್ರಧಾನ ಕಾರ್ಯದರ್ಶಿ ಶ್ರೀ ವಿನೋದ ಲಂಗೋಟಿ, ಅಭಿಯಾನದ ಸಹ ಸಂಚಾಲಕರಾದ ಶ್ರೀ ಮಲ್ಲಿಕಾರ್ಜುನ ಹಾಲದಾರಮಠ, ನಾಗರಾಜ ಪಾಟೀಲ ಸೇರಿದಂತೆ ಜಿಲ್ಲೆ ಹಾಗೂ ಮಂಡಲಗಳ ಮೋರ್ಚಾ ಅಧ್ಯಕ್ಷರು ಪ್ರಧಾನಕಾರ್ಯದರ್ಶಿಗಳು- ಪ್ರಮುಖ ಕಾರ್ಯಕರ್ತರು ಉಪಸ್ಥಿತರಿದ್ದರು.

# ಜೀವನದಲ್ಲಿ ಸಾಧನೆ ಇಲ್ಲದೆ ಸತ್ತರೆ ಸಾವಿಗೆ ಅವಮಾನ, ಆದರ್ಶವಿಲ್ಲದೆ ಬದುಕಿದರೆ ಬದುಕಿಗೆ ಅವಮಾನ: ಗುಬ್ಬಲಗುಡ್ಡ ಕೆಂಪಯ್ಯಸ್ವಾಮಿ ಮಠದ ಡಾ॥ ಮಲ್ಲಿಕಾರ್ಜುನ ಮಹಾಸ್ವಾಮಿಗಳು



**ಘಟಪ್ರಭಾ:** ಡಾ॥ ಸ್ವಾತಿ ವೈದ್ಯರಿಗೆ ಶ್ರೀಗಳು ಹಾಗೂ ಹಿರಿಯರು ಸತ್ಕಾರಿಸುತ್ತಿರುವುದು.

**ಬೆಳಗಾವಿ ವಾರ್ತೆ ಘಟಪ್ರಭಾ:** ಲೋಕ ರೂಡಿಯಲ್ಲಿ ನಾವೆಲ್ಲಾ ಹೇಳುತ್ತೇವೆ ಬರುವಾಗ ಏನು ತೆಗೆದುಕೊಂಡು ಬರುವುದಿಲ್ಲ, ಹೋಗುವಾಗ ಏನು ತೆಗೆದುಕೊಂಡು ಹೋಗುವುದಿಲ್ಲ ಎಂದು ಆದರೆ ಇತಿಹಾಸಕಾರರು ಹೇಳುತ್ತಾರೆ ಬರುವಾಗ ಏನು ತರುವುದಿಲ್ಲ ನಿಜ ಹೋಗುವಾಗ ಬದುಕಿನಲ್ಲಿ ಮಾಡಿದ ಸಾಧನೆ ನಮ್ಮ ಜತೆ ಬರುತ್ತದೆ ಆದ್ದರಿಂದ ಜೀವನದಲ್ಲಿ ಸಾಧನೆ ಇಲ್ಲದೆ ಸತ್ತರೆ ಸಾವಿಗೆ ಅವಮಾನ, ಆದರ್ಶವಿಲ್ಲದೆ ಬದುಕಿದರೆ ಬದುಕಿಗೆ ಅವಮಾನವೆಂದು ಗುಬ್ಬಲಗುಡ್ಡ ಕೆಂಪಯ್ಯಸ್ವಾಮಿ ಮಠದ ಡಾ॥ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಹೇಳಿದರು.

ಅವರು ಇಲ್ಲಿನ ಕರ್ನಾಟಕ ಆರೋಗ್ಯಧಾಮದ ಸಾಂಸ್ಕೃತಿಕ ಭವನದಲ್ಲಿ ಇತ್ತೀಚಿಗೆ ವಿಜಯಕರ್ನಾಟಕ, ಟೈಮ್ಸ್ ಆಫ್ ಇಂಡಿಯಾ ಮತ್ತು ಬೆಂಗಳೂರು ಮಿರರ್ ಸಮೂಹ ಸಂಸ್ಥೆಗಳು ಆಯೋಜಿಸಿದ ಕಾರ್ಯಕ್ರಮದಲ್ಲಿ ಆದರ್ಶ ಮಹಿಳೆ ಶ್ರೇಷ್ಠತಾ ಗೌರವ ಪಡೆದ ಆರೋಗ್ಯಧಾಮದ ಮುಖ್ಯವೈದ್ಯಾಧಿಕಾರಿಗಳಾಗಿರುವ ಡಾ॥ ಸ್ವಾತಿ ವೈದ್ಯರಿಗೆ ಆಸ್ಪತ್ರೆ ಹಾಗೂ ಸಾರ್ವಜನಿಕರು ಏರ್ಪಡಿಸಿದ ಅಭಿನಂದನಾ ಸಮಾರಂಭದ ಸಾನಿದ್ಯವಹಿಸಿ ಮಾತನಾಡಿ ಡಾ॥ ಸ್ವಾತಿ ವೈದ್ಯರು ಎಲೆ ಮರೆಯ ಕಾಯಿಯಂತೆ ಇಲ್ಲಿ ಸೇವೆ ಸಲ್ಲಿಸುತ್ತಿದ್ದರು ಅವರನ್ನು ವಿಜಯಕರ್ನಾಟಕದ ಸಮೂಹ ಸಂಸ್ಥೆಗಳು ಅವರನ್ನು ಗುರುತಿಸಿ ಪುರಸ್ಕಾರ ನೀಡಿರುವುದು ಈ ಭಾಗದ ಜನರಿಗೆ ತುಂಬಾ ಸಂತೋಷವಾಗಿದೆ. ಅವರಿಗೆ ಸಿಕ್ಕಿರುವ ಗೌರವ ಇಡಿ ಊರಿಗೆ ಸಿಕ್ಕಂತಾಗಿದೆ ಅವರ ವೈದ್ಯಕೀಯ ಸೇವೆ ವೈದ್ಯ ಲೋಕಕ್ಕೆ ಮಾದರಿಯಾಗಿದೆ. ಡಾ॥ ಸ್ವಾತಿ ವೈದ್ಯರಿಗೆ ಪ್ರಶಸ್ತಿ ಸಿಕ್ಕಿರುವುದರಿಂದ ಪ್ರಶಸ್ತಿಯ ಗೌರವು ಹೆಚ್ಚಾಗಿದೆ ಅವರು ಎಂದು ಪ್ರಚಾರ ಬಯಸಿದವರಲ್ಲ, ರೋಗಿಗಳ ಸೇವೆಯೆ ದೇವರ ಸೇವೆ ಎಂದು ಕಾರ್ಯನಿರ್ವಹಿಸುತ್ತಿದ್ದರು ಎಂದು ಹೇಳಿದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿರುವ ಡಾ॥ ಸ್ವಾತಿ ವೈದ್ಯರು ಆದರ್ಶ ಮಹಿಳೆ ಪ್ರಶಸ್ತಿ ಸಿಕ್ಕಿರುವುದು ನಮ್ಮ ಕುಟುಂಬಕ್ಕೆ ತುಂಬಾ ಸಂತೋಷವಾಗಿದೆ. ಇಲ್ಲಿನ ಜನರು ತುಂಬಾ ಸಂತೋಷದಿಂದ ಅಭಿನಂದನೆ ಕಾರ್ಯಕ್ರಮ ಏರ್ಪಡಿಸಿದ ನನ್ನ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದ್ದಾರೆ. ನನ್ನ ಆಯ್ಕೆ ಮಾಡಿರುವ ಸಮೂಹ ಸಂಸ್ಥೆಗಳಿಗೆ ಹಾಗೂ ಊರಿನ ಜನರಿಗೆ ಧನ್ಯವಾದವನ್ನು ಅರ್ಪಿಸುತ್ತಿದ್ದೇನೆ.

ಕಾರ್ಯಕ್ರಮವನ್ನು ಉದ್ದೇಶಿಸಿ ಹೊಸಮಠದ ವಿರುಪಾಕ್ಷ ಮಹಾಸ್ವಾಮಿಗಳು, ಡಾ॥ ವಿಲಾಸ ನಾಯಿಕವಾಡಿ, ಡಾ॥ ಶಶಿಧರ ಕಟ್ಟಿಮನಿ, ರಾಮಣ್ಣ ಹುಕ್ಕೇರಿ, ಮಾಜಿ ಸಚಿವ ಆರ್.ಎಮ್.ಪಾಟೀಲ, ಸುರೇಶ ಪಾಟೀಲ, ಪ್ರೊ. ಶೋಭಾ ನಾಯ್ಕರ ಮಾತನಾಡಿದರು. ವೇದಿಕೆಯಲ್ಲಿ ಸಂಸ್ಥೆಯ ಕಾರ್ಯದರ್ಶಿ ಡಾ॥ ಅಲ್ಕಾನಂದ ವೈದ್ಯ, ಡಾ॥ ರೋಹಿತ ವೈದ್ಯ ಕಾರ್ಯಕ್ರಮವನ್ನು ಭಾರತ ಸೇವಾದಳದ ನಿವೃತ್ತ ದಳಪತಿ ಬಸವರಾಜ ಹಟ್ಟಿಗೌಡರ ನಿರೂಪಿಸಿ ವಂದಿಸಿದರು. ಈ ಸಂದರ್ಭದಲ್ಲಿ ಜಿ.ಪ ಮಾಜಿ ಸದಸ್ಯ ವಂದನಾ ಕತ್ತಿ, ರಾಜು ಕತ್ತಿ, ಕಾಡಪ್ಪ ಕರೋಶಿ, ಶ್ರೀಕಾಂತ ಮಹಾಜನ, ಮತ್ತು ಊರಿನ ಹಿರಿಯರು, ಆಸ್ಪತ್ರೆಯ ಸಿಬ್ಬಂದಿ ವರ್ಗ, ವೈದ್ಯರು ಇದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ತಾಲೂಕಿನ ಬೆಟಗೇರಿ ಗ್ರಾಮದಲ್ಲಿರುವ ಭಕ್ತರ ಇಷ್ಟಾರ್ಥ ಪೂರೈಸುವ ಜಾಗೃತ ಶ್ರೀ ಹನುಮಂತ ದೇವರಿಗೆ ಶ್ರೀ ಹನುಮನ ಜಯಂತಿ ಅಂಗವಾಗಿ ಏ.2ರಂದು ಬೆಳಗ್ಗೆ ವಿಶೇಷ ಪೂಜೆ ನೆರವೇರಿಸಲಾಯಿತು.

# 'ಗಿಡಮರಗಳನ್ನು ಬೆಳೆಸುವುದು ಇಂದಿನ ಅವಶ್ಯಕತೆ ಇದೆ'-ತಹಶೀಲ್ದಾರ್ ಶ್ರೀಶೈಲ್ ಗುಡಮೆ

**ಬೆಳಗಾವಿ ವಾರ್ತೆ ಮೂಡಲಗಿ:** 'ಗಿಡಮರಗಳನ್ನು ಸಂರಕ್ಷಿಸಿ ಬೆಳೆಸುವುದು ಪರಿಸರಕ್ಕೆ ಕೊಡುವ ಬಹುದೊಡ್ಡ ಕೊಡುಗೆಯಾಗಿದೆ' ಎಂದು ತಹಶೀಲ್ದಾರ್ ಶ್ರೀಶೈಲ್ ಗುಡಮೆ ಅವರು ಹೇಳಿದರು.

ಮೂಡಲಗಿಯ ನಿಸರ್ಗ ಫೌಂಡೇಶನ್, ಸತ್ಯ ಸಾಯಿ ಸೇವಾ ಸಮಿತಿ ಹಾಗೂ ಯುವ ಜೀವನ ಸೇವಾ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ ಈರಪ್ಪ ಢವಳೇಶ್ವರ ಇವರ ಪುತ್ರಿ ಸಾದ್ವಿ ಇವಳ 10ನೇ ವರ್ಷದ ಹುಟ್ಟು ಹಬ್ಬದ ಅಂಗವಾಗಿ ಸಾಯಿ ಮಂದಿರ ರಸ್ತೆಯ ಎರಡೂ ಬದಿಯಲ್ಲಿ ಸಸಿ ನೆಡುವ ಹಾಗೂ ಅಲಂಕಾರಿಕ ಹೂಕುಂಡಗಳನ್ನು ವಿತರಿಸುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ವೃಕ್ಷ ಪ್ರೇಮಿ ಈರಪ್ಪ ಢವಳೇಶ್ವರ ಕಳೆದ 12 ವರ್ಷಗಳಿಂದ ಸಾರ್ವಜನಿಕ ಸ್ಥಳಗಳಲ್ಲಿ ಸಾವಿರಾರು ಸಸಿಗಳನ್ನು ನೆಟ್ಟು ಬೆಳೆಸಿರುವುದು ಶ್ಲಾಘನೀಯ ಕಾರ್ಯಕವಾಗಿದೆ ಎಂದರು.

ಮೂಡಲಗಿ ಶಿಕಕ್ಷಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಸೋನವಾಲಕರ, ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಕಾಶ ಹಿರೇಮಠ ಅವರು ಮಾತನಾಡಿ ಪರಿಸರ ಸಮತೋಲನಕ್ಕೆ ಗಿಡಮರಗಳನ್ನು ಬೆಳೆಸುವುದು ಅವಶ್ಯವಿದೆ. ಈರಪ್ಪ ಢವಳೇಶ್ವರ ಅವರ ಸಸಿ ನೆಡುವ ಕಾರ್ಯವು ಇತರ ಯುವಕರಿಗೆ



ಪ್ರೇರಣೆಯಾಗಿದೆ ಎಂದರು.

ತಹಶೀಲ್ದಾರ್ ಶ್ರೀಶೈಲ್ ಗುಡಮೆ, ಪುರಸಭೆ ಮುಖ್ಯಾಧಿಕಾರಿ ತುಕಾರಾಮ ಮಾದರ, ಸಿಡಿಪಿಒ ಯಲ್ಲಪ್ಪ ಗದಾಡಿ, ಮೂಡಲಗಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಸೋನವಾಲಕರ, ಅರಣ್ಯ ಇಲಾಖೆಯ ಕವನ ನಂದಿ ಹಾಗೂ ಈರಪ್ಪ ಢವಳೇಶ್ವರ ಅವರನ್ನು ಸಾಯಿ ಮಂದಿರದ ಪರವಾಗಿ ಸನ್ಮಾನಿಸಿದರು.

ಸತ್ಯ ಸಾಯಿ ಸೇವಾ ಸಮಿತಿಯ ಕೆ.ಬಿ. ನಾವಳ್ಳಿ ಅಧ್ಯಕ್ಷತೆವಹಿಸಿದ್ದರು.

ಅತಿಥಿಗಳಾಗಿ ಪುರಸಭೆ ಮುಖ್ಯಾಧಿಕಾರಿ ತುಕಾರಾಮ ಮಾದರ, ಸಿಡಿಪಿಒ ಯಲ್ಲಪ್ಪ ಗದಾಡಿ, ಅರಣ್ಯ ಇಲಾಖೆಯ ಕವನ ನಂದಿ, ಆರ್ಚಕ ಸಂಗಮೇಶ ಹಿರೇಮಠ, ವೈದ್ಯಾಧಿಕಾರಿ ಡಾ. ಭಾರತಿ ಕೋಣ , ಬಿಆರ್‌ಸಿ ರೇಣುಕಾ ಆನಿ, ಬಸವಪ್ರಭು ನಿಡಗುಂದಿ, ಎಸ್.ಆರ್. ಸೋನವಾಲಕರ, ನಿವೃತ್ತ ಪ್ರಾಚಾರ್ಯ ಎಸ್.ಡಿ. ತಳವಾರ, ಪ್ರಕಾಶ ಮಾದರ, ಕಸಾಪ ಅಧ್ಯಕ್ಷ ಸಂಜಯ ಶಿಂಧಿಹಟ್ಟಿ, ಕಲ್ಮೇಶ ಗೋಕಾಕ, ಚಂದ್ರಶೇಖರ ಪತ್ತಾರ, ಭಗೀರಥ ಉಪ್ಪಾರ ಅಭಿವೃದ್ಧಿ ಸೇವಾ ಸಂಘದ ಅಧ್ಯಕ್ಷ ಈಶ್ವರ ಕಂಕಣವಾಡಿ, ಶಂಕರ ಚಿಪ್ಪಲಕಟ್ಟಿ, ಬಸವರಾಜ ಮುಧೋಳ, ಸಾಲೀನಿ ಪೂಜೇರಿ, ರವಿ ನಂದಗಾಂವ ಇದ್ದರು.

ಬಾಲಶೇಖರ ಬಂದಿ ಪ್ರಾಸ್ತಾವಿಕ ಮಾತನಾಡಿದರು, ಮಲ್ಲು ಬೋಳನ್ನವರ ಸ್ವಾಗತಿಸಿದರು, ಈರಪ್ಪ ಢವಳೇಶ್ವರ ವಂದಿಸಿದರು

# ವಿಜೃಂಭಣೆಯಿಂದ ಜರುಗಿದ ರಥೋತ್ಸವ



**ಬೆಳಗಾವಿ ವಾರ್ತೆ ನವಲಗುಂದ:** ಹನುಮ ಜಯಂತಿ ನಿಮಿತ್ತ ಪಟ್ಟಣದಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಲಾಲಘಡ ಮಾರುತಿ ದೇವಸ್ಥಾನದ ರಥೋತ್ಸವವು ಗುರುವಾರ ಸಕಲ ವಾದ್ಯ, ಮೇಳಗಳೊಂದಿಗೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಬೆಳಿಗ್ಗೆ ದೇವಸ್ಥಾನದಲ್ಲಿ ಹನುಮನ ಮೂರ್ತಿಗೆ ವಿಶೇಷ ಅಲಂಕಾರ ಹಾಗೂ ಪೂಜೆ ನೆರವೇರಿಸಲಾಯಿತು. ಸಾವಿರಾರು ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನಾಶೀರ್ವಾದ ಪಡೆದರು. ಮದ್ಯಾಹ್ನ ಅನ್ನ ದಾಹೋಹ ಏರ್ಪಡಿಸಲಾಗಿತ್ತು

ಶಾಸಕ ಎನ್‌ಎಚ್.ಕೋನರಡ್ಡಿ ದೇವಸ್ಥಾನಕ್ಕೆ ಭೇಟಿ ನೀಡಿ ದೇವಸ್ಥಾನದ ಜೀರ್ಣೋದ್ದಾರ ಕಾಮಗಾರಿ ಕುರಿತಾಗಿ ಜೀರ್ಣೋದ್ಧಾರ ಸಮಿತಿ ಸದಸ್ಯರೊಂದಿಗೆ ಚರ್ಚಿಸಿ ಈಗಾಗಲೇ ಸರಕಾರದಿಂದ ಅನುದಾನ ನೀಡಲಾಗಿದ್ದು ಬರುವ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಅನುದಾನ ಒದಗಿಸುವ ಮೂಲಕ ದೇವಸ್ಥಾನದ ಅಭಿವೃದ್ಧಿಗೆ ಶ್ರಮಿಸುವುದಾಗಿ ಹೇಳಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001